ಮಂಗಳವಾರ, 23.12.2025
ಬೆಂಗಳೂರು, ಬೆಲೆ: 5ರೂ,
2 ಪುಟಗಳು
ಸಂಪುಟ 01 - ಸಂಚಿಕೆ 110
Digital Varthe Kannada Daily
Volume 01 - Issue 110
Tuesday 23.12.2025
Price: 5/- Rs
2 Pages Bangalore

PRGI/RNI: KNKAN/25/A1348

# ಡಿಜಿಟಲ್ ವಾರ್ತೆ

ಕನ್ನಡಿಗರ ಶಕ್ತಿ

ಕನ್ನಡ ದಿನಪತ್ರಿಕೆ

DIGITAL VARTHE
digitalvarthe@gmail.com
www.digitalvarthe.com

## ಸರ್ಕಾರಿ ಶಾಲೆಯಲ್ಲಿ ಮಕ್ಕಳ ಹಕ್ಕುಗಳ ಸಂರಕ್ಷಣೆಗೆ ಗ್ರಾಮ ಸಭೆ



**ದೊಡ್ಡಬಳ್ಳಾಪುರ:** ತಾಲೂಕಿನ ಹಾದ್ರೀಪುರ ಗ್ರಾಮದ ಸರ್ಕಾರಿ ಶಾಲೆಯಲ್ಲಿ ಮಕ್ಕಳ ಹಕ್ಕುಗಳ ಸಂರಕ್ಷಣೆ ಕುರಿತು ಗ್ರಾಮ ಸಭೆಯನ್ನು ಆಯೋಜಿಸಲಾಗಿತ್ತು. ಗ್ರಾಮ ಸಭೆಯಲ್ಲಿ ಗ್ರಾಮ ಪಂಚಾಯ್ತಿ ಅಧ್ಯಕ್ಷ ಎಚ್.ಜಿ.ಸತೀಶ್ ಕುಮಾರ್, ಸದಸ್ಯರಾದ ದೇವರಾಜ್, ಶಿಲ್ಪ.ಜಿ, ಪಿಡಿಒ ಎಸ್. ನಂದಿನಿ, ಕಾರ್ಯದರ್ಶಿ ಮರಿಸಿದ್ದಮ್ಮ, ಗ್ರಾಮ ಪಂಚಾಯ್ತಿ ಸಿಬ್ಬಂದಿ, ಎಸ್.ಡಿ.ಎಂ.ಸಿ ಅಧ್ಯಕ್ಷ ಹನುಮಂತರಾಜು, ಶಾಲೆಯ ಮುಖ್ಯಶಿಕ್ಷಕ ಎ.ಪಿ. ವಿರೂಪಾಕ್ಷಯ್ಯ, ಶಾಲಾ ಮಕ್ಕಳು ಭಾಗಿಯಾಗಿದ್ದರು. ರಾಷ್ಟ್ರಗೀತೆ, ಭಗವದ್ಗೀತೆ, ಸಂವಿಧಾನ ಪ್ರಸ್ತಾವನೆ ಓದುವ ಮೂಲಕ ಕಾರ್ಯಕ್ರಮ ಪ್ರಾರಂಭಿಸಲಾಯಿತು.

ಶಾಲಾ ಮಕ್ಕಳೇ ಅಧ್ಯಕ್ಷ, ಉಪಾಧ್ಯಕ್ಷರಾಗಿ ಗ್ರಾಮಸಭೆಯನ್ನು ನಡೆಸಿಕೊಟ್ಟರು. ಈ ವೇಳೆ ಮಕ್ಕಳ ಹಕ್ಕುಗಳಾದ ಬದುಕುಳಿಯುವ ಹಕ್ಕು, ರಕ್ಷಣೆಯ ಹಕ್ಕು, ಭಾಗವಹಿಸುವ ಹಕ್ಕು, ಅಭಿವೃದ್ಧಿ ಹೊಂದುವ ಹಕ್ಕುಗಳ ಬಗ್ಗೆ ಸಂಪನ್ಮೂಲ ವ್ಯಕ್ತಿ ಬೈಲಾಂಜಿನಮೂರ್ತಿ ಸಂಕ್ಷಿಪ್ತವಾಗಿ ಮಕ್ಕಳಿಗೆ ತಿಳಿಸಿಕೊಟ್ಟರು. ಮಕ್ಕಳು ಶಾಲಾ ಆಟದ ಮೈದಾನ ಮಾಡಿಕೊಡುವಂತೆ ಗ್ರಾಮಸಭೆಯಲ್ಲಿ ಅರ್ಜಿ ಮೂಲಕ ಮನವಿ ಮಾಡಿದರು. ಮಕ್ಕಳ ಮನವಿಯನ್ನು ಸ್ವೀಕರಿಸಿದ ಗ್ರಾಮ ಪಂಚಾಯ್ತಿ ಅಧ್ಯಕ್ಷ ಹಾಗೂ ಪಿಡಿಒ ಶೀಘ್ರವಾಗಿ ಮಾಡಿಕೊಡುವ ಭರವಸೆ ನೀಡಿದರು.

ಕಾರ್ಯಕ್ರಮ ಕುರಿತು ಮಾತನಾಡಿದ ಪಿಡಿಒ ಎಸ್. ನಂದಿನಿ, ಪೋಷಕರು ಮಕ್ಕಳ ಬಗ್ಗೆ ಕಾಳಜಿ ವಹಿಸಬೇಕು. ಕಷ್ಟಪಟ್ಟು, ಹೊಟ್ಟೆ ಬಟ್ಟೆ ಕಟ್ಟಿ ಓದಿಸುವ ತಂದೆ-ತಾಯಿಗಳಿಗೆ ಮಕ್ಕಳು ಚೆನ್ನಾಗಿ ಓದಿ ಒಳ್ಳೆ ಹೆಸರು ತರಬೇಕು ಎಂದರು. ಇದೇ ವೇಳೆ ಮೂಲಭೂತ ಹಕ್ಕುಗಳ ಬಗ್ಗೆ ತಿಸಿಸಿದರು.

## ಪುರುಷ ಆಯೋಗ ಶ್ರೀಘ್ರ ರಚನೆಗೆ ಒತ್ತಾಯಿಸಿದ ರಾಜ್ಯ ಪ್ರಶಸ್ತಿ ವಿಜೇತ ಆನಂದ್ ಸಿ ತಿರುಮಲ


**ಬೆಂಗಳೂರು:** ಪುರುಷರ ಮೇಲೆ ನಡೆಯುತ್ತಿರುವ ಸಾಮಾಜಿಕ, ಕಾನೂನು ಹಾಗೂ ಮಾನಸಿಕ ಸಮಸ್ಯೆಗಳ ಕುರಿತು ಚರ್ಚಿಸಲು ಮತ್ತು ಪುರುಷ ಆಯೋಗ ರಚನೆಯ ಅಗತ್ಯವನ್ನು ಸರ್ಕಾರದ ಗಮನಕ್ಕೆ ತರಲು ಇಂದು ನಿರ್ಧಾರ ತೆಗೆದುಕೊಂಡು ಸರ್ಕಾರಕ್ಕೆ ಒತ್ತಾಯಿಸಲಾಗಿದೆ ತುರ್ತಾಗಿ ಕರ್ನಾಟಕ ರಾಜ್ಯದಲ್ಲಿ ಪುರುಷ ರ ಆಯೋಗ ರಚನೆ ಮಾಡುವ ಕುರಿತು ಮಾತನಾಡಿದ ರಾಜ್ಯ ಪ್ರಶಸ್ತಿ ವಿಜೇತ ಆನಂದ್ ಸಿ ತಿರುಮಲ ಮಾತನಾಡಿದ ಅವರು ಕುಟುಂಬ ನ್ಯಾಯಾಲಯಗಳಲ್ಲಿ ಅನೇಕ ಪುರುಷರು ಸುಳ್ಳು ಆರೋಪಗಳು, ಮಾನಸಿಕ ಒತ್ತಡ, ಆರ್ಥಿಕ ಸಂಕಷ್ಟ ಗಳನ್ನು ಎದುರಿಸು ತ್ತಿರುವುದನ್ನು ವಿವರಿಸಿದರು. ಮಹಿಳಾ ಆಯೋಗ ಇರುವಂತೆ, ಪುರುಷರ ಸಮಸ್ಯೆಗಳಿಗೂ ಪ್ರತ್ಯೇಕ ವೇದಿಕೆ ಅಗತ್ಯವಾಗಿದೆ ಎಂದು ಅವರು ಹೇಳಿದರು.



"ಪುರುಷ ಆಯೋಗ ಮಹಿಳೆಯರ ಹಕ್ಕುಗಳಿಗೆ ವಿರುದ್ಧವಲ್ಲ. ಇದು ಸಮಾನ ನ್ಯಾಯದ ಪರವಾದ ಒಂದು ಹೆಜ್ಜೆ. ನ್ಯಾಯವು ಲಿಂಗ ಆಧಾ ರಿತವಾ ಗಿರಬಾರದು," ಎಂದು ಅವರು ತಿಳಿಸಿ ದರು. ಈ ಹಿನ್ನೆಲೆಯಲ್ಲಿ ರಾಜ್ಯ/ಕೇಂದ್ರ ಸರ್ಕಾರವು ತಕ್ಷಣವೇ ಪುರುಷ ಆಯೋಗವನ್ನು ರಚಿಸಿ, ಕಾನೂನು ಸಲಹೆ, ಕೌನ್ಸೆಲಿಂಗ್ ಮತ್ತು ಸಮಸ್ಯೆಗಳ ಪರಿಹಾರಕ್ಕೆ ಕ್ರಮ ಕೈಗೊಳ್ಳಬೇಕು ಎಂದು ಸರ್ಕಾರಕ್ಕೆ ಒತ್ತಾಯಿಸಲಾಯಿತು. ನ್ಯಾಯ ಮತ್ತು ಸಮಾನತೆಯ ಮೌಲ್ಯಗಳನ್ನು ಕಾಪಾಡುವ ನಿಟ್ಟಿನಲ್ಲಿ ಈ ಹೋರಾಟವನ್ನು ಶಾಂತಿಯುತವಾಗಿ ರಾಜ್ಯದ ಎಲ್ಲಾ ಜಿಲ್ಲಾ ಕೇಂದ್ರಗಳಲ್ಲಿ ಮುಂದುವರಿಸಲಾಗುವುದು ಎಂದು ತಿಳಿಸಲಾಯಿತು.

## ಬಿರಿಯಾನಿ ತಿನ್ನಲು ಹೊರಟವರ ಮೇಲೆ ವಿದ್ಯಾರ್ಥಿಗಳ ದರೋಡೆ ದಾಳಿ

**ಬೆಂಗಳೂರು:** ಹೊಸಕೋಟೆ ಬಿರಿಯಾನಿ ತಿನ್ನಲು ತೆರಳಿದ್ದ ಬೆಂಗಳೂರಿನ ಪ್ರತಿಷ್ಠಿತ ಕಾಲೇಜು ವಿದ್ಯಾರ್ಥಿಗಳನ್ನ ದರೋಡೆ ಮಾಡಿದ್ದಲ್ಲದೆ, ಒತ್ತೆಯಾಳಾಗಿ ಇಟ್ಟುಕೊಂಡು ಹೆಚ್ಚಿನ ಹಣಕ್ಕೆ ಬೇಡಿಕೆ ಇಟ್ಟಿರುವ ಘಟನೆ ನಡೆದಿದೆ. ಪ್ರಕರಣ ಸಂಬಂಧ ಓರ್ವ ಆರೋಪಿಯನ್ನು ಪೊಲೀಸರು ಬಂಧಿಸಿದ್ದು, ಉಳಿದ ಆರೋಪಿಗಳಿಗಾಗಿ ಬಲೆ ಬೀಸಿದ್ದಾರೆ. ವಿದ್ಯಾರ್ಥಿಗಳ ಸ್ನೇಹಿತರಿಂದಲೂ ಹಣ ಪೀಕಿದ ದುಷ್ಕರ್ಮಿಗಳು ಬಾಗಲೂರು ವ್ಯಾಪ್ತಿಯ ಪ್ರತಿಷ್ಟಿತ ಕಾಲೇಜಿನಲ್ಲಿ ವ್ಯಾಸಂಗ ಮಾಡುತ್ತಿರುವ ನಾಲ್ವರು ವಿದ್ಯಾರ್ಥಿಗಳು ಎರಡು ಪ್ರತ್ಯೇಕ ಬೈಕ್‌ಗಳಲ್ಲಿ ಭಾನುವಾರ ಮುಂಜಾನೆ ಹೊಸಕೋಟೆ ಬಿರಿಯಾನಿ ತಿನ್ನಲು ತೆರಳಿದ್ದರು. ಬಿರಿಯಾನಿ ತಿಂದು ವಾಪಾಸ್ ಬರುವಾಗ ಆರು ಗಂಟೆ ಸುಮಾರಿಗೆ ಮೇಡಹಳ್ಳಿ ಬಳಿ ಆರೇಳು ಮಂಂದಿ ದುಷ್ಕರ್ಮಿಗಳು ವಿದ್ಯಾರ್ಥಿಗಳನ್ನು ಅಡ್ಡಗಟ್ಟಿದ್ದಾರೆ.



ಬಳಿಕ ವಿದ್ಯಾರ್ಥಿಗಳ ಎರಡು ಬೈಕ್‌ಗಳನ್ನು ಕಸಿದುಕೊಂಡು, ಮೊಬೈಲ್‌ಗಳನ್ನು ಕಿತ್ತಿಟ್ಟುಕೊಂಡು ಸುಲಿಗೆ ಮಾಡಿದ್ದಾರೆ. ವಿದ್ಯಾರ್ಥಿಗಳ ಮೊಬೈಲ್‌ನಲ್ಲಿದ್ದ 1,800 ರೂ. ಹಣವನ್ನು ಬೇರೆ ಬೇರೆ ಖಾತೆಗಳಿಗೆ ಯುಪಿಐ ಮುಖಾಂತರ ವರ್ಗಾವಣೆ ಮಾಡಿಸಿ ಕೊಂಡಿದ್ದಲ್ಲದೆ, ವಿದ್ಯಾರ್ಥಿಗಳನ್ನು ಸುಮಾರು 1 ಗಂಟೆ ಕಾಲ ಒತ್ತೆಯಾಳಗಿಸಿ ಇಟ್ಟುಕೊಂಡಿದ್ದಾರೆ.


ಅವರ ಸ್ನೇಹಿತರಿಗೂ ಕರೆ ಮಾಡಿಸಿ ಹಣ ಪೀಕಿದ್ದಾರೆ ಎನ್ನಲಾಗಿದೆ. ಘಟನೆ ಬೆನ್ನಲ್ಲೇ ಎಚ್ಚೆತ್ತ ವಿದ್ಯಾರ್ಥಿಗಳ ಸ್ನೇಹಿತರು ಬಾಗಲೂರು ಪೊಲೀಸ್ ಠಾಣೆಗೆ ತೆರಳಿ ಈ ಬಗ್ಗೆ ಮಾಹಿತಿ ನೀಡಿದ್ದಾರೆ. ಕೂಡಲೇ ಖಾಕಿ ಕಾರ್ಯಾಚರಣೆ ನಡೆಸಿದ್ದು, ಪೊಲೀಸರು ಬರ್ತಿದಂತೆ ವಿದ್ಯಾರ್ಥಿಗಳನ್ನು ಬಿಟ್ಟು ಕಿಡಿಗೇಡಿಗಳು ಸ್ಥಳದಿಂದ ಪರಾರಿಯಾಗಿದ್ದಾರೆ. ಪ್ರಕರಣ ಸಂಬಂಧ ಕೆ.ಜಿ. ಹಳ್ಳಿಯ ಅರ್ಫಾತ್ ಅಹಮದ್ (24) ಎಂಬಾತನನ್ನು ಪೊಲೀಸರು ಬಂಧಿಸಿದ್ದು, ಉಳಿದ ಆರೋಪಿಗಳಿಗಾಗಿ ಶೋಧ ಮುಂದುವರಿಸಿದ್ದಾರೆ. ಸಂತ್ರಸ್ತ ವಿದ್ಯಾರ್ಥಿಗಳು ನೀಡಿದ ದೂರಿನ ಅನ್ವಯ ಆವಲಹಳ್ಳಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಘಟನೆ ಬೆನ್ನಲ್ಲೇ ಎಚ್ಚೆತ್ತ ವಿದ್ಯಾರ್ಥಿಗಳ ಸ್ನೇಹಿತರು ಬಾಗಲೂರು ಪೊಲೀಸ್ ಠಾಣೆಗೆ ತೆರಳಿ ಈ ಬಗ್ಗೆ ಮಾಹಿತಿ ನೀಡಿದ್ದಾರೆ.

ಕೂಡಲೇ ಖಾಕಿ ಕಾರ್ಯಾಚರಣೆ ನಡೆಸಿದ್ದು, ಪೊಲೀಸರು ಬರ್ತಿದಂತೆ ವಿದ್ಯಾರ್ಥಿಗಳನ್ನು ಬಿಟ್ಟು ಕಿಡಿಗೇಡಿಗಳು ಸ್ಥಳದಿಂದ ಪರಾರಿಯಾಗಿದ್ದಾರೆ. ಪ್ರಕರಣ ಸಂಬಂಧ ಕೆ.ಜಿ. ಹಳ್ಳಿಯ ಅರ್ಫಾತ್ ಅಹಮದ್ (24) ಎಂಬಾತನನ್ನು ಪೊಲೀಸರು ಬಂಧಿಸಿದ್ದು, ಉಳಿದ ಆರೋಪಿಗಳಿಗಾಗಿ ಶೋಧ ಮುಂದುವರಿಸಿದ್ದಾರೆ. ಸಂತ್ರಸ್ತ ವಿದ್ಯಾರ್ಥಿಗಳು ನೀಡಿದ ದೂರಿನ ಅನ್ವಯ ಆವಲಹಳ್ಳಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ವೀಕ್ ಡೇಸ್ ನಲ್ಲಿ ಪ್ರೊಫೆಸರ್, ವೀಕೆಂಡ್‌ನಲ್ಲಿ ಖತರ್ನಾಕ್ ಕಳ್ಳಿ


**ಬೆಂಗಳೂರು**: ರಾಜಧಾನಿಯಲ್ಲಿ ಅತ್ಯಂತ ವಿಚಿತ್ರ ಅಪರಾಧ ಪ್ರಕರಣವೊಂದು ಬೆಳಕಿಗೆ ಬಂದಿದೆ. ವಿದ್ಯಾರ್ಥಿಗಳಿಗೆ ಉತ್ತಮ ಸಂಸ್ಕಾರ ಕಲಿಸಬೇಕಾದ ಕಾಲೇಜು ಪ್ರಾಧ್ಯಾಪಕಿಯೊಬ್ಬರು, ರಜೆ ದಿನಗಳಲ್ಲಿ ಹೈಟೆಕ್ ಕಳ್ಳಿಯಾಗಿ ಬದಲಾಗುತ್ತಿದ್ದ ಘಟನೆ ಬಸವನಗುಡಿಯಲ್ಲಿ ನಡೆದಿದೆ. ಬಂಧಿತ ಆರೋಪಿಯನ್ನು ರೇವತಿ ಎಂದು ಗುರುತಿಸಲಾಗಿದೆ. ಮೂಲತ: ಶಿವಮೊಗ್ಗ ಮೂಲದ ರೇವತಿ ಬೆಂಗಳೂರಿನ ಕೆ.ಆರ್.ಪುರಂ ನಲ್ಲಿ ವಾಸವಾಗಿದ್ದು, ಬೆಳ್ಳಂದೂರು ಬಳಿಯ ಪ್ರತಿಷ್ಠಿತ ಖಾಸಗಿ ಎಂಜಿನಿಯರಿಂಗ್ ಕಾಲೇಜಿನಲ್ಲಿ ಕನ್ನಡ ಪ್ರಾಧ್ಯಾಪಕಿಯಾಗಿ ಕೆಲಸ ಮಾಡುತ್ತಿದ್ದಳು.

ವಾರಪೂರ್ತಿ ಗೌರವಯುತವಾಗಿ ಪಾಠ ಮಾಡುತ್ತಿದ್ದ ಈಕೆ, ಭಾನುವಾರ ಅಥವಾ ಕಾಲೇಜಿಗೆ ರಜೆ ಇದ್ದ ದಿನಗಳಲ್ಲಿ ತನ್ನ ಅಸಲಿ ಮುಖವಾಡ



ಕಳಚುತ್ತಿದ್ದಳು. ಮದುವೆಗೆ ಹೋಗುವಂತೆ ಅಚ್ಚುಕಟ್ಟಾಗಿ ರೆಡಿಯಾಗಿ, ಬೆಲೆಬಾಳುವ ಸೀರೆ ಉಟ್ಟು ಮದುವೆ ಮನೆಗಳಿಗೆ ಸಂಬಂಧಿಕರಂತೆ ಎಂಟ್ರಿ ಕೊಡುತ್ತಿದ್ದಳು. ಯಾರಿಗೂ ಅನುಮಾನ ಬಾರದಂತೆ ಎಲ್ಲರನ್ನೂ ಮಾತನಾಡಿಸಿ, ಮದುವೆ ಸಂಭ್ರಮದ ನಡುವೆ ಅತಿಥಿಗಳು ಇಟ್ಟಿದ್ದ ಚಿನ್ನಾಭರಣಗಳನ್ನು ತನ್ನ ಕೈಚಳಕದಿಂದ ಅವುಗಳನ್ನ ಕಳ್ಳತನ ಮಾಡುತ್ತಿದ್ದರು.

ಅಷ್ಟೇ ಅಲ್ಲದೆ, ಕಳ್ಳತನದ ನಂತರ ನಿರಾಳವಾಗಿ ಮದುವೆ ಊಟವನ್ನೂ ಮುಗಿಸಿ ಅಲ್ಲಿಂದ ಪರಾರಿಯಾ ಗುತ್ತಿದ್ದಳು. ಬಸವನಗುಡಿಯ ದ್ವಾರಕನಾಥ್ ಕಲ್ಯಾಣ ಮಂಟಪದಲ್ಲಿ ನಡೆದ ಕಳ್ಳತನದ ಬೆನ್ನತ್ತಿದ ಪೊಲೀಸರು ಸಿಸಿಟಿವಿ ದೃಶ್ಯಾವಳಿಗಳ ಆಧಾರದ ಮೇಲೆ ಈಕೆಯನ್ನು ಬಂಧಿಸಿದಾಗ ಈಕೆಯ ಹಿನ್ನೆಲೆ ಕಂಡು ಬೆಚ್ಚಿಬಿದ್ದಿದ್ದಾರೆ. ಸದ್ಯ ಈಕೆಯ ಮೇಲೆ ಬಸವನಗುಡಿ ಠಾಣೆಯಲ್ಲೇ ಮೂರು ಪ್ರಕರಣಗಳು ದಾಖಲಾಗಿವೆ.



ದಾವಣಗೆರೆಯಲ್ಲಿ ಶೇರು ಮಾರುಕಟ್ಟೆ ಹೆಸರಲ್ಲಿ 76 ಲಕ್ಷ ರೂಪಾಯಿ ವಂಚನೆ ತಂತ್ರಜ್ಞಾನವನ್ನು ಬಳಸಿಕೊಂಡು ಜನರಿಗೆ ಕೋಟ್ಯಂತರ ರೂಪಾಯಿ ನಾಮ ಹಾಕುವ ಸೈಬರ್ ವಂಚಕರ ಜಾಲ ದಾವಣಗೆರೆಯಲ್ಲಿ ಸಕ್ರಿಯವಾಗಿದೆ. ನಗರದ ವಿನಾಯಕ ಬಡಾವಣೆಯ ನಿವಾಸಿಯೊಬ್ಬರು ಶೇರು ಮಾರುಕಟ್ಟೆಯಲ್ಲಿ ಹೂಡಿಕೆಯ ಆಸೆಗೆ ಬಿದ್ದು ಬರೋಬ್ಬರಿ 76.48 ಲಕ್ಷ ರೂಪಾಯಿ ಕಳೆದುಕೊಂಡಿದ್ದಾರೆ.

ಫೇಸ್‌ಬುಕ್ ಮೂಲಕ ಪರಿಚಯವಾದ ವ್ಯಕ್ತಿಯೊಬ್ಬ ಹೂಡಿಕೆಯ ಆಸೆ ತೋರಿಸಿದ್ದನು. ನಮ್ಮ ಕಂಪನಿಯಲ್ಲಿ ಹಣ ಹೂಡಿಕೆ ಮಾಡಿದರೆ ಅಲ್ಪಾವಧಿಯಲ್ಲಿ ಕೋಟಿ ಕೋಟಿ ಲಾಭ ಗಳಿಸಬಹುದು, ಯಾವಾಗ ಬೇಕಿದ್ದರೂ ಹಣ ಹಿಂಪಡೆಯಬಹುದು ಎಂದು ನಂಬಿಸಿದ್ದನು. ಇದನ್ನು ನಿಜವೆಂದು ನಂಬಿದ ಸಂತ್ರಸ್ತರು ಸೆಪ್ಟೆಂಬ ರ್‌ನಿಂದ ಡಿಸೆಂಬರ್‌ವರೆಗೆ ಹಂತ ಹಂತವಾಗಿ ವಿವಿಧ ಬ್ಯಾಂಕ್ ಖಾತೆಗಳಿಗೆ ಹಣ ವರ್ಗಾಯಿಸಿದ್ದರು. ಕೊನೆಗೆ ಲಾಭದ ಹಣವಿರಲಿ, ತಾವು ಹೂಡಿಕೆ ಮಾಡಿದ ಅಸಲು ಹಣವನ್ನೂ ಹಿಂಪಡೆಯಲು ಸಾಧ್ಯವಾಗದಿದ್ದಾಗ ವಂಚನೆ ನಡೆದಿರುವುದು ದೃಢಪಟ್ಟಿದೆ. ಸದ್ಯ ದಾವಣಗೆರೆಯ ಸೆನ್ (CEN) ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ತನಿಖೆ ಮುಂದುವರಿದಿದೆ.

## ವಿಡಿಯೋ ಕಾಲ್ ಮಾಡುತ್ತಲೇ ಲೈವ್‌ನಲ್ಲಿ ನೇಣಿಗೆ ಶರಣಾದ ಮಹಿಳೆ

**ಬಳ್ಳಾರಿ:** ಪ್ರಿಯಕರ ಮದುವೆಗೆ ಒಪ್ಪದ ಹಿನ್ನೆಲೆಯಲ್ಲಿ ಮನನೊಂದು ಮಹಿಳೆಯೊಬ್ಬರು ಕಣ್ಣೀರಿಡುತ್ತಲೇ ವಿಡಿಯೋ ಮಾಡುತ್ತಾ ಆತ್ಮಹತ್ಯೆ ಮಾಡಿಕೊಂಡಿರುವ ದುರ್ಘಟನೆ ಬಳ್ಳಾರಿಯ ಹುಸೇನ್ ನಗರದಲ್ಲಿ ನಡೆದಿದೆ. ಮುನ್ನಿ (23) ಆತ್ಮಹತ್ಯೆ ಮಾಡಿಕೊಂಡ ಮಹಿಳೆ ಎಂದು ಗುರುತಿಸಲಾಗಿದೆ. ಮುನ್ನಿಗೆ ಈಗಾಗಲೇ ಮದುವೆಯಾಗಿದ್ದು, ಮಕ್ಕಳಿದ್ದಾರೆ.

ಆದರೆ ಕೆಲವು ವೈಯಕ್ತಿಕ ಕಾರಣಗಳಿಂದ ಪತಿಯಿಂದ ದೂರವಿದ್ದು, ಪ್ರತ್ಯೇಕವಾಗಿ ಜೀವನ ನಡೆಸುತ್ತಿದ್ದಳು ಎನ್ನಲಾಗಿದೆ. ಈ ನಡುವೆ ಮೊಹಮ್ಮದ್ ಶೇಖ್ ಎಂಬ ಯುವಕನೊಂದಿಗೆ ಪರಿಚಯವಾಗಿದ್ದು, ಆ ಸ್ನೇಹ ಕ್ರಮೇಣ ಪ್ರೀತಿಯಾಗಿ ಬದಲಾಗಿದೆ ಎಂದು ತಿಳಿದುಬಂದಿದೆ. ಪರಸ್ಪರ ಸಂಪರ್ಕ ದಲ್ಲಿದ್ದು, ನಿರಂತರವಾಗಿ ಭೇಟಿ ಮಾಡುತ್ತಿದ್ದರು ಎನ್ನಲಾಗಿದೆ.



ಮುನ್ನಿ, ಮೊಹಮ್ಮದ್ ಶೇಖ್ ಅವರನ್ನು ಮದುವೆಯಾಗುವಂತೆ ಒತ್ತಾಯಿಸಲು ಆರಂಭಿಸಿದ್ದಾಳೆ. ಆದರೆ ಈ ವಿಚಾರದಲ್ಲಿ ಯುವಕ ನಿರಾಕರಿಸಿದ್ದಾನೆ ಎನ್ನಲಾಗಿದೆ. ಇದೇ ವಿಚಾರವಾಗಿ ಇಬ್ಬರ ನಡುವೆ ತೀವ್ರ ಜಗಳಗಳು ನಡೆದಿದ್ದು, ಇದರಿಂದ ಮಾನಸಿಕವಾಗಿ ಕುಗ್ಗಿಹೋಗಿದ್ದಳು ಎಂದು ಹೇಳಲಾಗುತ್ತಿದೆ. ಘಟನೆ ನಡೆದ ದಿನ, ಮುನ್ನಿ ತನ್ನ ಮನೆಯಲ್ಲೇ ಒಬ್ಬಳೇ ಇದ್ದ ಸಂದರ್ಭ ಈ ನಿರ್ಧಾರ ತೆಗೆದುಕೊಂಡಿದ್ದಾಳೆ. ಆತ್ಮಹತ್ಯೆಗೂ ಮುನ್ನ ತನ್ನ ಮೊಬೈಲ್ ಫೋನ್‌ನಲ್ಲಿ ವಿಡಿಯೋ ರೆಕಾರ್ಡ್ ಮಾಡಿದ್ದು, ಅದರಲ್ಲಿ ಕಣ್ಣೀರಿಡುತ್ತಲೇ ತನ್ನ ನೋವು, ಪ್ರಿಯಕರನ ನಿರಾಕರಿಸಿದ್ದ ಬಗ್ಗೆ ಹೇಳಿಕೊಂಡಿದ್ದಾಳೆ.

ಆ ಬಳಿಕ ಮನೆಯೊಳಗೇ ನೇಣು ಬಿಗಿದುಕೊಂಡು ಆತ್ಮಹತ್ಯೆಗೆ ಶರಣಾಗಿದ್ದಾಳೆ. ವಿಡಿಯೋ ವಿಷಯ ತಿಳಿದು ಕುಟುಂಬಸ್ಥರು ತೀವ್ರ ಆಕ್ರೋಶ ವ್ಯಕ್ತಪಡಿಸಿದ್ದು, ಈ ಸಾವಿಗೆ ಮೊಹಮ್ಮದ್ ಶೇಖ್ ಕಾರಣ ಎಂದು ಆರೋಪಿಸಿದ್ದಾರೆ. ಅವರ ಪ್ರಕಾರ, ಮದುವೆಯ ಭರವಸೆ ನೀಡಿ ಬಳಿಕ ನಿರಾಕರಿಸಿದ ಕಾರಣದಿಂದಲೇ ಮುನ್ನಿ ಇಂತಹ ನಿರ್ಧಾರಕ್ಕೆ ಬಂದಿದ್ದಾಳೆ.

ಈ ಹಿನ್ನೆಲೆಯಲ್ಲಿ ಆರೋಪಿಯ ವಿರುದ್ಧ ಕಠಿಣ ಕ್ರಮ ಕೈಗೊಳ್ಳಬೇಕೆಂದು ಕುಟುಂಬಸ್ಥರು ಒತ್ತಾಯಿಸಿದ್ದಾರೆ. ಮಾಹಿತಿ ಪಡೆದ ಬಳ್ಳಾರಿಯ ಗಾಂಧಿನಗರ ಪೊಲೀಸ್ ಠಾಣೆಯ ಸಿಬ್ಬಂದಿ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ. ಮೃತದೇಹವನ್ನು ಮರಣೋತ್ತರ ಪರೀಕ್ಷೆಗೆ ರವಾನಿಸಲಾಗಿದ್ದು, ವಿಡಿಯೋ ಹಾಗೂ ಮೊಬೈಲ್ ಫೋನ್ ಅನ್ನು ವಶಕ್ಕೆ ಪಡೆಯಲಾಗಿದೆ. ಪ್ರಕರಣ ದಾಖಲಿಸಿ ಕೊಂಡಿರುವ ಪೊಲೀಸರು ತನಿಖೆ ಮುಂದುವರಿಸಿದ್ದಾರೆ.

## ಅಪಘಾತಕ್ಕೀಡಾದವನ ಮೊಬೈಲ್‌ನಿಂದ 80 ಸಾವಿರ ದೋಚಿದ್ದ ಆರೋಪಿಗಳು ಅರೆಸ್ಟ್

**ಮೈಸೂರು:** ಸಾಂಸ್ಕೃತಿಕ ನಗರಿ ಮೈಸೂರಿನಲ್ಲಿ ಅಪಘಾತದ ನೋವಿನಲ್ಲಿದ್ದ ವ್ಯಕ್ತಿಯ ಅಸಹಾಯಕತೆಯನ್ನು ಬಂಡವಾಳ ಮಾಡಿಕೊಂಡ ಇಬ್ಬರು ವ್ಯಕ್ತಿಗಳು, ಆಸ್ಪತ್ರೆಗೆ ಸೇರಿಸುವ ನಾಟಕವಾಡಿ ಅವರ ಬ್ಯಾಂಕ್ ಖಾತೆಯಲ್ಲಿದ್ದ ಹಣವನ್ನೇ ಲೂಟಿ ಮಾಡಿದ್ದ ಇಬ್ಬರು ಆರೋಪಿಗಳನ್ನ ಮೈಸೂರಿನ ಸಿ.ಇ.ಎನ್ (CEN) ಪೊಲೀಸರು ಬಂಧಿಸಿದ್ದಾರೆ. ಮೈಸೂರು ತಾಲೂಕಿನ ಕಡಕೊಳ ನಿವಾಸಿಯಾದ ಗಣೇಶ್ ಎಂಬವರು ಕಳೆದ ಡಿಸೆಂಬರ್ 19 ರಂದು ಮಧ್ಯರಾತ್ರಿ ಫ್ಯಾಕ್ಟರಿಯಲ್ಲಿ ಕೆಲಸ ಮುಗಿಸಿ ತಮ್ಮ ಬೈಕ್‌ನಲ್ಲಿ ಮನೆಗೆ ಹೋಗುತ್ತಿದ್ದರು.

ಈ ವೇಳೆ ಕಡಕೊಳದ ಬಳಿ ಅವರ ಬೈಕ್ ಅಪಘಾತಕ್ಕೀಡಾಗಿ ಗಣೇಶ್ ರಸ್ತೆಯ ಮೇಲೆ ಬಿದ್ದು ತೀವ್ರವಾಗಿ ಗಾಯಗೊಂಡಿದ್ದರು. ರಕ್ತದ ಮಡುವಿನಲ್ಲಿ ಬಿದ್ದು ನೋವಿನಿಂದ ಕಿರುಚುತ್ತಿದ್ದ ಗಣೇಶ್ ಅವರ ಬಳಿಗೆ ಸಹಾಯ ಮಾಡುವ ನೆಪದಲ್ಲಿ ರಮೇಶ್ ಮತ್ತು ಮನು ಎಂಬುವವರು ಬಂದಿದ್ದಾರೆ. ಗಾಯಾಳು ಗಣೇಶ್ ಅವರನ್ನು ಕೂಡಲೇ ಆಸ್ಪತ್ರೆಗೆ ಸೇರಿಸುವ ಬದಲು, ಆರೋಪಿಗಳಾದ ರಮೇಶ್ ಮತ್ತು ಮನು ಅವರ ಮೊಬೈಲ್ ಫೋನ್ ಅನ್ನು ಕೈಗೆತ್ತಿಕೊಂಡಿದ್ದಾರೆ. ಗಣೇಶ್ ನೋವಿನಲ್ಲಿದ್ದದ್ದನ್ನು ಗಮನಿಸಿ ಅವರ ಮೊಬೈಲ್ ಅನ್‌ಲಾಕ್ ಮಾಡಿಸಿ, ಯುಪಿಐ (UPI) ಆಪ್ ಮೂಲಕ ಬರೋಬ್ಬರಿ 80,000 ರೂಪಾಯಿಗಳನ್ನು ತಮ್ಮ ಖಾತೆಗೆ ವರ್ಗಾಯಿಸಿಕೊಂಡಿದ್ದಾರೆ. ಹಣ ವರ್ಗಾವಣೆಯಾದ ಕೂಡಲೇ ಗಣೇಶ್‌ನನ್ನು ಆಸ್ಪತ್ರೆಗೆ ಕರೆದೊಯ್ಯುವ ಬದಲು ಅಲ್ಲೇ ಬಿಟ್ಟು ಆರೋಪಿಗಳು ಪರಾರಿಯಾಗಿದ್ದಾರೆ. ವಿಷಯ ತಿಳಿದು ಸ್ಥಳಕ್ಕೆ ಆಗಮಿಸಿದ ಗಣೇಶ್ ಅವರ ಸಹೋದರ ಅಂಕನಾಯಕ, ತಕ್ಷಣವೇ ಗಾಯಾಳುವನ್ನು ಆಸ್ಪತ್ರೆಗೆ ದಾಖಲಿಸಿದ್ದಾರೆ. ನಂತರ ಗಣೇಶ್ ಅವರ ಬ್ಯಾಂಕ್ ಖಾತೆಯಿಂದ ಹಣ ಕಟ್ ಆಗಿರುವ ಸಂದೇಶ ನೋಡಿದಾಗ ಹಣ ವರ್ಗಾವಣೆಯಾಗಿರುವ ಬಗ್ಗೆ ತಿಳಿದುಬಂದಿದೆ.

ಬಳಿಕ ಈ ಕುರಿತು ಮೈಸೂರು ಸಿ.ಇ.ಎನ್ ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಲಾಯಿತು. ತಾಂತ್ರಿಕ ಮಾಹಿತಿಗಳು ಮತ್ತು ಬ್ಯಾಂಕ್ ವರ್ಗಾವಣೆಯ ದಾಖಲೆಗಳನ್ನು ಬೆನ್ನತ್ತಿದ ಪೊಲೀಸರು, ಮೈಸೂರಿನ ಮಹದೇವಪುರ ನಿವಾಸಿಗಳಾದ ರಮೇಶ್ ಮತ್ತು ಮನು ಎಂಬುವವರನ್ನು ಬಂಧಿಸಿದ್ದಾರೆ. ಬಂಧಿತರಿಂದ ಲೂಟಿ ಮಾಡಿದ್ದ 80,000 ರೂಪಾಯಿ ನಗದು ಮತ್ತು ಕೃತ್ಯಕ್ಕೆ ಬಳಸಿದ್ದ ಎರಡು ಮೊಬೈಲ್ ಫೋನ್‌ಗಳನ್ನು ಪೊಲೀಸರು ವಶಪಡಿಸಿಕೊಂಡಿದ್ದಾರೆ. ಪ್ರಸ್ತುತ ಆರೋಪಿಗಳನ್ನು ನ್ಯಾಯಾಂಗ ಬಂಧನಕ್ಕೆ ಒಪ್ಪಿಸಲಾಗಿದೆ. ಅಪಘಾತವಾದಾಗ ಸಂತ್ರಸ್ತರಿಗೆ ಸಹಾಯ ಮಾಡುವ ನೆಪದಲ್ಲಿ ದೋಚುವ ಇಂತಹ ಕೃತ್ಯಗಳು ಹೆಚ್ಚುತ್ತಿದ್ದು, ಸಾರ್ವಜನಿಕರು ಎಚ್ಚರಿಕೆಯಿಂದ ಇರಬೇಕೆಂದು ಪೊಲೀಸರು ಮನವಿ ಮಾಡಿದ್ದಾರೆ.

## ಕೋರ್ಟ್ ಆದೇಶದ ಬೆನ್ನಲ್ಲೇ ಭೀಕರ ದುರಂತ ಮಕ್ಕಳಿಗೆ ವಿಷವುಣಿಸಿ ಹತ್ಯೆ, ದಂಪತಿ ಆತ್ಮಹತ್ಯೆ

**ತಿರುವನಂತಪುರಂ:** ಮಕ್ಕಳನ್ನು ಪತ್ನಿ ಜೊತೆ ಬಿಡಲು ಕೋರ್ಟ್ ಆದೇಶಿಸಿದ್ದಕ್ಕೆ ತನ್ನ ಎರಡು ಮಕ್ಕಳಿಗೆ ವಿಷವುಣಿಸಿದ ತಂದೆ ತಾಯಿಯ ಜೊತೆ ತಾನು ನೇಣಿಗೆ ಶರಣಾಗಿರುವ ಘಟನೆ ಕೇರಳದ ಕಣ್ಣೂರು ಜಿಲ್ಲೆಯ ಪಯ್ಯ ನ್ನೂರಿನ ರಾಮಂತ ಳಿಯಲ್ಲಿ ನಡೆದಿದೆ. ಮಗಳು ಹಿಮಾ(6), ಪುತ್ರ ಕಣ್ಣನ್‌ಗೆ(2) ವಿಷ ನೀಡಿ, ಬಳಿಕ ತಾಯಿ ಉಷಾ(65) ಜೊತೆಗೆ ಕಲಾಧರನ್(36) ನೇಣು ಬಿಗಿದ ಆತ್ಮಹತ್ಯೆ ಮಾಡಿಕೊಂಡಿದ್ದಾನೆ.




ಮೂಲತಃ ರಾಮಂತಳಿಯ ಸೆಂಟ್ರಲ್ ನಿವಾಸಿಯಾಗಿದ್ದ ಕಲಾಧರನ್ ಬಾಣಸಿಗನಾಗಿ ಕೆಲಸ ಮಾಡುತ್ತಿದ್ದ ಎಂದು ತಿಳಿದುಬಂದಿದೆ. ಸೋಮವಾರ (ಡಿ.22) ರಾತ್ರಿ ಈ ಘಟನೆ ನಡೆದಿದೆ. ಪತಿ ಕಲಾಧರನ್ ಹಾಗೂ ಆತನ ಪತ್ನಿ ಜೊತೆಗಿರಲಿಲ್ಲ. ದಂಪತಿಯ ಎರಡು ಮಕ್ಕಳು ಕಲಾ ಧರನ್ ಜೊತೆಗಿದ್ದರು. ಈ ಕುರಿತ ಕೇಸ್ ಕೋರ್ಟ್ ನಲ್ಲಿ ಬಾಕಿಯಿತ್ತು. ಇತ್ತೀಚಿಗಷ್ಟೇ ಕೋರ್ಟ್ ಆದೇಶ ಹೊರಡಿಸಿ, ಮಕ್ಕಳನ್ನು ಪತ್ನಿಯ ಸುಪರ್ದಿಗೆ ನೀಡಬೇಕೆಂದು ತಿಳಿಸಿತ್ತು. ಕೋರ್ಟ್ ತೀರ್ಪಿನ ಬಳಿಕ ಮಕ್ಕಳನ್ನು ತಕ್ಷಣ ತಮ್ಮ ಸುಪರ್ದಿಗೆ ನೀಡಬೇಕೆಂದು ಪತ್ನಿ ಪೊಲೀ ಸರನ್ನು ಭೇಟಿಯಾಗಿದ್ದರು.

ಅದರಂತೆ ಇಂದು (ಡಿ.23) ಮಕಳನ್ನು ಪತ್ನಿಯ ವಶಕ್ಕೆ ಕೊಡುವಂತೆ ಕಲಾಧರನ್ ತಂದೆ ಉಣ್ಣಿಕೃಷ್ಣನ್‌ಗೆ ಪೊಲೀಸರು ಫೋನ್ ಮಾಡಿ ತಿಳಿಸಿದ್ದರು. ಕೋರ್ಟ್ನ ಆದೇಶ ಕಲಾಧರನ್‌ಗೆ ಒಪ್ಪಿಗೆ ಇರಲಿಲ್ಲ. ಹೀಗಾಗಿ ತನ್ನ ಎರಡು ಮಕ್ಕಳಿಗೂ ವಿಷವುಣಿಸಿ, ಬಳಿಕ ತಾಯಿಯ ಜೊತೆಗೆ ತಾನು ಆತ್ಮಹತ್ಯೆ ಮಾಡಿಕೊಂಡಿದ್ದಾನೆ. ಆಟೋ ಡ್ರೈವರ್ ಆಗಿ ಕೆಲಸ ಮಾಡುತ್ತಿದ್ದ ತಂದೆ ಉಣ್ಣಿಕೃಷ್ಣನ್ ರಾತ್ರಿ ಮನೆಗೆ ಬಂದಾಗ ಎಷ್ಟು ಕೂಗಿದರೂ ಯಾರು ಬಾಗಿಲು ತೆರೆಯಲಿಲ್ಲ. ಕೂಡಲೇ ಪೊಲೀಸರಿಗೆ ಮಾಹಿತಿ ನೀಡಿದ್ದಾರೆ. ಸ್ಥಳಕ್ಕೆ ಪೊಲೀಸರು ಬಂದು ಬಾಗಿಲು ತೆಗೆದ ಬಳಿಕ ಪ್ರಕರಣ ಬಯಲಾಗಿದೆ. ಪ್ರಕರಣದ ಕುರಿತು ರಾಮಂತಳಿ ಪೊಲೀಸರು ತನಿಖೆ ಆರಂಭಿಸಿದ್ದಾರೆ

## ಮಾಜಿ ಐಪಿಎಸ್ ಅಧಿಕಾರಿ ಅಮರ್ ಸಿಂಗ್ ಚಾಹಲ್ ಆತ್ಮಹತ್ಯೆಗೆ ಯತ್ನ

**ಪಟಿಯಾಲ:** ಪಂಜಾಬ್‌ನ ಮಾಜಿ ಐಪಿಎಸ್ (IPS) ಅಧಿಕಾರಿ ಅಮರ್ ಸಿಂಗ್ ಚಾಹಲ್ ಇಂದು ಪಟಿಯಾಲದಲ್ಲಿರುವ ತಮ್ಮ ನಿವಾಸದಲ್ಲಿ ಗುಂಡು ಹಾರಿಸಿಕೊಂಡು ಆತ್ಮಹತ್ಯೆಗೆ ಯತ್ನಿಸಿದ್ದಾರೆ. ಅವರನ್ನು ಆಸ್ಪತ್ರೆಗೆ ದಾಖಲಿಸಲಾಗಿದ್ದು,

ಅವರ ಸ್ಥಿತಿ ಇನ್ನೂ ಗಂಭೀರವಾಗಿದೆ. ಮೂಲಗಳ ಪ್ರಕಾರ ತೀವ್ರವಾದ ಆರ್ಥಿಕ ನಷ್ಟ ಮತ್ತು ಮಾನಸಿಕ ಒತ್ತಡದಿಂದ ಅವರು ಆತ್ಮಹತ್ಯೆಗೆ ಯತ್ನಿಸಿದ್ದಾರೆ ಎನ್ನಲಾಗಿದೆ. ಈ ಸ್ಥಳದಿಂದ ವಶಪಡಿಸಿಕೊಂಡ ಸೂಸೈಡ್ ನೋಟ್ ಪ್ರಕಾರ ಆನ್‌ಲೈನ್ ವಂಚನೆಯಿಂದ ಉಂಟಾದ ತೀವ್ರ ಆರ್ಥಿಕ ನಷ್ಟ ಮತ್ತು ಮಾನಸಿಕ ಯಾತನೆಯನ್ನು ಸೂಚಿಸುತ್ತದೆ ಎಂದು ಪೊಲೀಸರು ತಿಳಿಸಿದ್ದಾರೆ. ಈ ಘಟನೆಗಳ ಅನುಕ್ರಮವನ್ನು ಖಚಿತಪಡಿಸಿಕೊಳ್ಳಲು ಮತ್ತು ಟಿಪ್ಪಣಿಯ ವಿಷಯಗಳನ್ನು ಪರಿಶೀಲಿಸಲು ಅಧಿಕಾರಿಗಳು ವಿವರವಾದ ತನಿಖೆಯನ್ನು ಪ್ರಾರಂಭಿಸಿದ್ದಾರೆ.



ಗುಂಡಿನ ದಾಳಿಯ ಬಗ್ಗೆ ಮಾಹಿತಿ ಪಡೆದ ಪೊಲೀಸ್ ತಂಡ ಸ್ಥಳಕ್ಕೆ ಧಾವಿಸಿತು ಮತ್ತು ಚಾಹಲ್ ಅವರನ್ನು ತಕ್ಷಣ ಆಸ್ಪತ್ರೆಗೆ ಕರೆದೊಯ್ಯಲಾಯಿತು. ಅವರ ಸ್ಥಿತಿ ಗಂಭೀರವಾಗಿದೆ ಮತ್ತು ವೈದ್ಯರು ಅವರನ್ನು ಉಳಿಸಲು ಎಲ್ಲ ಪ್ರಯತ್ನಗಳನ್ನು ಮಾಡುತ್ತಿದ್ದಾರ

ಅಂದಹಾಗೆ, ನಿವೃತ್ತ ಪೊಲೀಸ್ ಇನ್ಸ್‌ಪೆಕ್ಟರ್ ಜನರಲ್ ಆಗಿರುವ ಚಾಹಲ್ 2015ರ ಫರೀದ್‌ಕೋಟ್‌ನ ಬೆಹ್ಬಲ್ ಕಲಾನ್ ಮತ್ತು ಕೊಟ್ಕಾಪುರ ಗುಂಡಿನ ದಾಳಿ ಪ್ರಕರಣಗಳಲ್ಲಿ ಆರೋಪಿಗಳಲ್ಲಿ ಒಬ್ಬರು. 2023ರಲ್ಲಿ, ಹೆಚ್ಚುವರಿ ಪೊಲೀಸ್ ಮಹಾನಿರ್ದೇಶಕ ಎಲ್.ಕೆ. ಯಾದವ್ ನೇತೃತ್ವದ ಪಂಜಾಬ್ ಪೊಲೀಸ್ ವಿಶೇಷ ತನಿಖಾ ತಂಡ (ಎಸ್‌ಐಟಿ) ಚಾಹಲ್ ಸೇರಿದಂತೆ ಹಲವಾರು ಪೊಲೀಸ್ ಅಧಿಕಾರಿಗಳ ವಿರುದ್ಧ ಹಾಗೂ ಮಾಜಿ ಮುಖ್ಯಮಂತ್ರಿ ಪ್ರಕಾಶ್ ಸಿಂಗ್ ಬಾದಲ್ ಮತ್ತು ಸುಖ್‌ಬೀರ್ ಸಿಂಗ್ ಬಾದಲ್ ಅವರ ವಿರುದ್ಧ ಪ್ರಕರಣದಲ್ಲಿ ಆರೋಪಪಟ್ಟಿ ಸಲ್ಲಿಸಿತ್ತು. ಅಮರ್ ಸಿಂಗ್ ಚಾಹಲ್ ಅವರ ಕುಟುಂಬ ಸದಸ್ಯರು ಅವರು ಆನ್‌ಲೈನ್ ವಂಚನೆಗೆ ಬಲಿಯಾಗಿದ್ದು, 8 ಕೋಟಿ ರೂ. ಕಳೆದುಕೊಂಡಿದ್ದಾರೆ ಎಂದು ಹೇಳಿದ್ದಾರೆ. ಅವರು 12 ಪುಟಗಳ ಸೂಸೈಡ್ ನೋಟ್‌ನಲ್ಲಿ ಕೂಡ ಇದನ್ನು ವಿವರಿಸಿದ್ದಾರೆ.

## ಹೃದಯಾಘಾತ ಎಂದು ಬಿಂಬಿಸಿದ ಪತ್ನಿ, ತನಿಖೆಯಲ್ಲಿ ಹೊರಬಂದ ಕೊಲೆ ಸತ್ಯ

**ಹೈದರಾಬಾದ್:** ಗಂಡನನ್ನು ಕೊಂದು ಹೃದಯಾಘಾತ ಎಂಬು ಬಿಂಬಿಸಲು ಹೋಗಿ ಮಹಿಳೆ ಕೊನೆಗೂ ಸಿಕ್ಕಿಬಿದ್ದಿದ್ದಾಳೆ. ಪ್ರಿಯಕರನ ಜತೆ ಸೇರಿ ಪತಿಯನ್ನು ಕೊಂದು ಹೃದಯಾಘಾತವಾಗಿ ಶೌಚಾಲಯದಲ್ಲಿ ಕುಸಿದುಬಿದ್ದು ಪ್ರಾಣ ಕಳೆದುಕೊಂಡಿದ್ದಾರೆ ಎಂದು ಸುಳ್ಳು ಹೇಳಿಕೆ ನೀಡಿದ್ದರು. ಆಕೆಯ ಪತಿ ಖಾಸಗಿ ವಿಶ್ವವಿದ್ಯಾಲಯವೊಂದರಲ್ಲಿ ಲಾಜಿಸ್ಟಿಕ್ಸ್ ಮ್ಯಾನೇಜರ್ ಆಗಿ ಕೆಲಸ ಮಾಡುತ್ತಿದ್ದರು. ಬೋಡುಪ್ಪಲ್‌ನಲ್ಲಿರುವ ನಿವಾಸದಲ್ಲಿ 45 ವರ್ಷದ ವ್ಯಕ್ತಿಯನ್ನು ಅವರ ಪತ್ನಿ ಹಾಗೂ ಆಕೆಯ ಜತೆ ಸಂಬಂಧ ಹೊಂದಿದ್ದ ಕಟ್ಟಡ ಕಾರ್ಮಿಕ ಸೇರಿ ಕೊಲೆ ಮಾಡಿದ್ದರು ಎಂದು ರಾಚಕೊಂಡ ಪೊಲೀಸರು ತಿಳಿಸಿದ್ದಾರೆ. ಹೃದಯಾಘಾತದಿಂದ ಸಾವು ಸಂಭವಿಸಿದೆ ಎಂದು ಹೇಳುವ ಮೂಲಕ ಮಹಿಳೆ ಸಂಬಂಧಿಕರನ್ನು ದಾರಿ ತಪ್ಪಿಸಿದ್ದಾರೆ ಎಂದು ಹೇಳಿದ್ದಾರೆ. ತಮ್ಮ ಪತಿ ಮನೆಯ ಶೌಚಾಲಯದಲ್ಲಿ ಪ್ರಜ್ಞಾಹೀನ ಸ್ಥಿತಿಯಲ್ಲಿ ಪತ್ತೆಯಾಗಿದ್ದು, ಮಲ್ಕಾಜ್‌ಗಿರಿಯ ಸರ್ಕಾರಿ ಆಸ್ಪತ್ರೆಯಲ್ಲಿ ಮೃತಪಟ್ಟಿದ್ದಾರೆ ಎಂದು ಘೋಷಿಸಲಾಗಿದೆ ಎಂದು ಅವರು ಮೆಡಿಪಲ್ಲಿ ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಿದ್ದಾರೆ.

ತನಿಖೆಯ ಸಮಯದಲ್ಲಿ, ಮೃತ ದೇಹದ ಮೇಲೆ ಅನುಮಾನಾಸ್ಪದ ಗಾಯಗಳು ಕಂಡುಬಂದಿದ್ದು, ಅದರಲ್ಲಿ ಕೆನ್ನೆ ಮತ್ತು ಕುತ್ತಿಗೆಯ ಮೇಲಿನ ಗಾಯಗಳು ಸೇರಿವೆ ಎಂದು ಪೊಲೀಸರು ತಿಳಿಸಿದ್ದಾರೆ, ಇದು ಸಾವಿನ ಬಗ್ಗೆ ಕೆಲವು ಅನುಮಾನಗಳನ್ನು ಹುಟ್ಟುಹಾಕಿದೆ. ಸಿಸಿಟಿವಿ ದೃಶ್ಯಾವಳಿಗಳು ಮತ್ತು ತಾಂತ್ರಿಕ ಪುರಾವೆಗಳ ಆಧಾರದ ಮೇಲೆ, ಮಹಿಳೆ ಮತ್ತು ಇತರ ಇಬ್ಬರು ಆರೋಪಿಗಳನ್ನು ಬಂಧಿಸಲಾಗಿದೆ. ತನಿಖೆಯ ಸಮಯದಲ್ಲಿ ಮಹಿಳೆಯ ಪತಿ ಈ ಸಂಬಂಧದ ಬಗ್ಗೆ ಅನುಮಾನಗೊಂಡು ಆಕೆಯನ್ನು ಪ್ರಶ್ನಿಸಲು ಪ್ರಾರಂಭಿಸಿದ್ದ, ತನಗೆ ಕಿರುಕುಳ ನೀಡುತ್ತಿದ್ದ ಈ ಕಾರಣದಿಂದ ಪ್ರಿಯಕರನ ಜತೆ ಸೇರಿ ಪತಿಯನ್ನು ಕೊಲ್ಲಲು ಸಂಚು ರೂಪಿಸಿದ್ದಾಗಿ ಆಕೆ ಒಪ್ಪಿಕೊಂಡಿದ್ದಾಳೆ. ಮನೆಗೆ ಹಿಂದಿರುಗಿದ ನಂತರ ಪತನಿ ಹಾಗೂ ಪ್ರಿಯಕರ ಇಬ್ಬರೂ ಸೇರಿ ಆತನ ಮೇಲೆ ಹಲ್ಲೆ ನಡೆಸಿದ್ದರು. ಪತ್ನಿ ಪತಿಯ ಕಾಲು ಹಿಡಿದುಕೊಂಡರೆ, ಪ್ರಿಯಕರ ದುಪಟ್ಟಾದಲ್ಲಿ ಕತ್ತು ಬಿಗಿದು ಕೊಲೆ ಮಾಡಿದ್ದ. ಕೊಲೆಯ ನಂತರ, ಆರೋಪಿ ಬಲಿಪಶುವಿನ ಬಟ್ಟೆಗಳನ್ನು ಬದಲಾಯಿಸಿ ಸಾಕ್ಷ್ಯಗಳನ್ನು ನಾಶಮಾಡಲು ಪ್ರಯತ್ನಿಸಿದ್ದರು ಎಂದು ಪೊಲೀಸರು ತಿಳಿಸಿದ್ದಾರೆ.

ಸುದ್ದಿ ಹಾಗೂ ಜಾಹೀರಾತುಗಳಿಗೆ ಸಂಪರ್ಕಿಸಿ
:9538786812/988065534

Printed by: R Ramesh, Published by Abhishek D R On Behalf of Abhishek D R, Printed at Maruthi Enterprises. No.1159, Near Floor Mill, D Cross, Doddaballapura Town, Bengaluru rural, Karnataka - 561203, Published at No. 3769/1, Rajarathna Nivasa, KSRTC Layout, Near Ambedkar Stadium, Rayan Nagara, Nelamangala. Editor Abhishek D R.

# ಸಮುದ್ರದ ಅಲೆಗಳ ಮಧ್ಯೆ ಕೃಷ್ಣನ ವಿಗ್ರಹ ಪತ್ತೆ

**ಉಡುಪಿ**: ವಿಶ್ವಪ್ರಸಿದ್ಧ ಮಲ್ಪೆ ಸಮುದ್ರದ ಅಲೆಗಳ ನಡುವೆ ವಿಗ್ರಹವೊಂದು ತೇಲಿ ಬಂದಿದ್ದು, ಇದನ್ನು ಕಂಡ ಪ್ರವಾಸಿಗರು ಮತ್ತು ಭಕ್ತರು ಮತ್ತೆ ಉಡುಪಿಯಲ್ಲಿ ಕೃಷ್ಣನ ಪವಾಡ ಸಂಭವಿಸಿದೆ ಎಂದು ಸಂಭ್ರಮಿಸಿದರು. ಆದರೆ, ಈ ವಿಗ್ರಹದ ಅಸಲಿಯತ್ತು ಈಗ ಚರ್ಚೆಗೆ ಗ್ರಾಸವಾಗಿದೆ. ಭಾನುವಾರ ಉಡುಪಿಯ ಕೃಷ್ಣ ಮಠದಲ್ಲಿ ಇಸ್ಕಾನ್ (ISKCON) ಸಂಸ್ಥೆಯ ವತಿಯಿಂದ ಬೃಹತ್ ಧಾರ್ಮಿಕ ಕಾರ್ಯಕ್ರಮ ಆಯೋಜಿಸಲಾಗಿತ್ತು.

ಸಾವಿರಾರು ಇಸ್ಕಾನ್ ಅನುಯಾಯಿಗಳು ಮಠದ ದರ್ಶನ ಮುಗಿಸಿ ಸಂಜೆ ಮಲ್ಪೆ ಬೀಚ್‌ಗೆ ತೆರಳಿದ್ದರು. ಈ ಸಂದರ್ಭದಲ್ಲಿ ಸಮುದ್ರದ ಅಲೆಗಳ ನಡುವೆ ವಿಗ್ರಹವೊಂದು ತೇಲಿ ಬರುವುದು ಜನರ ಕಣ್ಣಿಗೆ ಬಿದ್ದಿದೆ. ಐತಿಹಾಸಿಕವಾಗಿ ಉಡುಪಿಯ ಶ್ರೀಕೃಷ್ಣನ ವಿಗ್ರಹವೂ ಸಮುದ್ರದ ಮೂಲಕವೇ ಬಂದು (ಗೋಪಿಯ ಚಂದನದ ಮುದ್ದೆಯಲ್ಲಿ) ಮಧ್ವಾಚಾರ್ಯರಿಗೆ ಸಿಕ್ಕಿತ್ತು ಎಂಬ ನಂಬಿಕೆ ಇರುವುದರಿಂದ, ಮಲ್ಪೆಯಲ್ಲಿ ಸಿಕ್ಕ ಈ ಮೂರ್ತಿಯನ್ನು ಕಂಡ ಕೂಡಲೇ ಜನರು ಇದು ಶ್ರೀಕೃಷ್ಣನದ್ದೇ ಪವಾಡ ಎಂದು ಸಂಭ್ರಮಿಸಿದ್ದಾರೆ. ವಿಗ್ರಹವನ್ನು ದಡಕ್ಕೆ ತಂದ ಭಕ್ತರು ಅದಕ್ಕೆ ಪೂಜೆ ಸಲ್ಲಿಸಿ, ಸಂಭ್ರಮದಿಂದ ಫೋಟೋ ಮತ್ತು ವಿಡಿಯೋಗಳನ್ನು ಸಾಮಾಜಿಕ ಜಾಲತಾಣಗಳಲ್ಲಿ ಹಂಚಿಕೊಂಡರು. ಆದರೆ, ಈ ವಿಗ್ರಹವನ್ನು ಸೂಕ್ಷ್ಮವಾಗಿ ಗಮನಿಸಿದ ಸ್ಥಳೀಯರು ಮತ್ತು ಧಾರ್ಮಿಕ ತಜ್ಞರು ಇದು ಶ್ರೀಕೃಷ್ಣನ ವಿಗ್ರಹವಲ್ಲ ಎಂದು ತಿಳಿಸಿದ್ದಾರೆ.




ವಿಗ್ರಹದ ಕೆತ್ತನೆ, ಆಕಾರ ಮತ್ತು ಕೈಯಲ್ಲಿರುವ ಆಯುಧಗಳ ವಿನ್ಯಾಸವನ್ನು ಗಮನಿಸಿದರೆ, ಇದು ದೇವಾಲಯಗಳ ಪ್ರವೇಶ ದ್ವಾರದಲ್ಲಿರುವ 'ಜಯ-ವಿಜಯ' ಎಂಬ ದ್ವಾರಪಾಲಕರ ಮೂರ್ತಿಯಂತೆ ಕಾಣುತ್ತಿದೆ. ವಿಗ್ರಹದ ಶೈಲಿಯು ವಿಷ್ಣುವಿನ ರೂಪಕ್ಕೆ ಹೋಲಿಕೆಯಾಗಿದ್ದರೂ, ದ್ವಾರಪಾಲಕರಿಗೆ ಇರುವಂತಹ ವಿಶಿಷ್ಟ ಲಕ್ಷಣಗಳು ಇದರಲ್ಲಿ ಗೋಚರಿಸುತ್ತಿವೆ.

ಕೃಷ್ಣನ ಮೂರ್ತಿಗಳಲ್ಲಿ ಸಾಮಾನ್ಯವಾಗಿ ಕಂಡುಬರುವ ಕೊಳಲು ಅಥವಾ ಬಾಲಲೀಲೆಯ ಮುದ್ರೆಗಳು ಇದರಲ್ಲಿ ಕಂಡುಬಂದಿಲ್ಲ. ಕರಾವಳಿ ಭಾಗದಲ್ಲಿ ಒಂದು ಸಂಪ್ರದಾಯವಿದೆ. ದೇವಾಲಯಗಳ ಪುನರ್ ನವೀಕರಣ ಅಥವಾ ಬ್ರಹ್ಮಕಲಶೋತ್ಸವದ ಸಂದರ್ಭದಲ್ಲಿ ಹಳೆಯ ಅಥವಾ ಬಿರುಕು ಬಿಟ್ಟ (ಭಿನ್ನವಾದ) ವಿಗ್ರಹಗಳನ್ನು ನದಿ ಅಥವಾ ಸಮುದ್ರದಲ್ಲಿ ವಿಸರ್ಜನೆ ಮಾಡಲಾಗುತ್ತದೆ.

ಸ್ಥಳೀಯರಾದ ಸೂರಜ್ ಸಾಲಿಯಾನ್ ಅವರು ಮಾಧ್ಯಮಗಳೊಂದಿಗೆ ಮಾತನಾಡಿ, ಯಾವುದೋ ದೇವಸ್ಥಾನದ ಜೀರ್ಣೋದ್ಧಾರದ ವೇಳೆ ವಿಸರ್ಜಿಸಲಾದ ದ್ವಾರಪಾಲಕರ ವಿಗ್ರಹವು ಅಲೆಗಳ ಹೊಡೆತಕ್ಕೆ ಸಿಲುಕಿ ದಡ ಸೇರಿರಬಹುದು. ಇದನ್ನು ಪವಾಡ ಎಂದು ತಪ್ಪಾಗಿ ಭಾವಿಸಲಾಗಿದೆ ಎಂದು ಸ್ಪಷ್ಟಪಡಿಸಿದ್ದಾರೆ. ಸದ್ಯ ಮಲ್ಪೆ ಬೀಚ್‌ನಲ್ಲಿ ಸಿಕ್ಕ ವಿಗ್ರಹವು ಭಕ್ತರಲ್ಲಿ ಧಾರ್ಮಿಕ ಭಾವನೆಯನ್ನು ಹೆಚ್ಚಿಸಿದ್ದರೂ, ಅದು ಕೃಷ್ಣನದ್ದಲ್ಲ ಎಂಬುದು ಸ್ಪಷ್ಟವಾಗಿದೆ.

# ಕೆಲಸ ಕೊಡಿಸುವುದಾಗಿ ನಂಬಿಸಿ ಸ್ನೇಹಿತೆಯರಿಗೆ ಪಂಗನಾಮ ಹಾಕಿದ ಯುವತಿ

**ಚಿಕ್ಕಬಳ್ಳಾಪುರ:** ಉದ್ಯೋಗದ ಕನಸು ಕಂಡ ಯುವತಿಯರನ್ನೇ ಗುರಿಯಾಗಿಸಿಕೊಂಡು, ಕೆಲಸ ಕೊಡಿಸುವುದಾಗಿ ನಂಬಿಸಿ ಲಕ್ಷಾಂತರ ರೂಪಾಯಿ ಹಣ ಪಡೆದು ವಂಚನೆ ಮಾಡಿದ ಕಿಲಾಡಿ ಕಪಲ್‌ನ ಕಥೆ ಚಿಕ್ಕಬಳ್ಳಾಪುರ ಜಿಲ್ಲೆಯಲ್ಲಿ ಬೆಳಕಿಗೆ ಬಂದಿದೆ. ಚಿಕ್ಕಬಳ್ಳಾಪುರ ತಾಲೂಕಿನ ಅಂಕಣಗುಂದಿ ಗ್ರಾಮದಲ್ಲಿ ಈ ವಂಚನೆ ನಡೆದಿದೆ. ಅನುಷಾ ಎಂಬ ಯುವತಿ ತನ್ನ ಬಾಯ್‌ಫ್ರೆಂಡ್ ಅರುಣ್ ಜೊತೆಗೂಡಿ ಈ ವಂಚನಾ ಜಾಲವನ್ನು ರೂಪಿಸಿದ್ದಾಳೆ ಎನ್ನಲಾಗಿದೆ.



ಅನುಷಾ ತನ್ನದೇ ಸ್ನೇಹಿತೆಯರನ್ನು ಗುರಿಯಾಗಿಸಿಕೊಂಡು, ಅವರಿಗೆ ಉತ್ತಮ ಸಂಬಳದ ಖಾಸಗಿ ಉದ್ಯೋಗ ಕೊಡಿಸುವುದಾಗಿ ಭರವಸೆ ನೀಡಿದ್ದಾಳೆ. ಆಕೆಯ ಮಾತುಗಳಿಗೆ ನಂಬಿಕೆ ಇಟ್ಟುಕೊಂಡ ಸ್ನೇಹಿತೆಯರು, ಹಂತ ಹಂತವಾಗಿ ಹಣ ನೀಡಿದ್ದು, ನಂತರ ವಂಚನೆಯ ಬಲೆಗೆ ಬಿದ್ದಿದ್ದಾರೆ. ಪ್ರಕರಣದ ಮತ್ತೊಬ್ಬ ಆರೋಪಿ ಅರುಣ್ ತನ್ನನ್ನು ಬೆಂಗಳೂರಿನ 'ಸಾಯಿ ಸೇಲ್ಸ್ ಡ್ರೈವ್' ಎಂಬ ಖಾಸಗಿ ಸಂಸ್ಥೆಯ ಸಿಇಒ ಎಂದು ಪರಿಚಯಿಸಿಕೊಂಡಿದ್ದಾನೆ. ದೊಡ್ಡ ಕಂಪನಿಯಲ್ಲಿ ಉನ್ನತ ಹುದ್ದೆ ಹೊಂದಿದ್ದೇನೆ, ನನ್ನ ಮೂಲಕ ಕೆಲಸ ಸಿಕ್ಕರೆ ಕೈ ತುಂಬಾ ಹಣ ಸಂಪಾದಿಸಬಹುದು ಎಂದು ಯುವತಿಯರನ್ನು ನಂಬಿಸಿದ್ದಾನೆ. ಉದ್ಯೋಗಕ್ಕೆ ಸಂಬಂಧಿಸಿದ ದಾಖಲೆಗಳು, ತರಬೇತಿ, ಪ್ರೊಸೆಸಿಂಗ್ ಫೀಸ್ ಎಂಬ ಹೆಸರಿನಲ್ಲಿ ಸಾವಿರ ರೂಪಾಯಿಗಳಿಂದ ಲಕ್ಷಾಂತರ ರೂಪಾಯಿವರೆಗೆ ಹಣ ವಸೂಲಿ ಮಾಡಲಾಗಿದೆ ಎಂಬ ಆರೋಪ ಕೇಳಿಬಂದಿದೆ.


ಆರಂಭದ ಕೆಲ ದಿನಗಳಲ್ಲಿ ಕೆಲಸ ಕೊಡಿಸುತ್ತೇವೆ ಎಂದು ಕಾಲಹರಣ ಮಾಡುತ್ತಿದ್ದ ಆರೋಪಿಗಳು, ನಂತರ ಸಂಪರ್ಕವೇ ಕಡಿದುಕೊಂಡಿದ್ದಾರೆ ಎನ್ನಲಾಗಿದೆ. ಕೆಲಸ ಕೇಳಿದರೆ ಒಂದೊಂದು ಕಾರಣ ಹೇಳಿ ತಪ್ಪಿಸಿಕೊಳ್ಳುತ್ತಿದ್ದರು. ಕೊನೆಗೆ ಹಣ ಕೇಳಿದಾಗಲೂ ಮರುಪಾವತಿ ಮಾಡದೆ ವಂಚನೆ ನಡೆಸಿದ್ದಾರೆ ಎಂದು ಸಂತ್ರಸ್ತ ಯುವತಿಯರು ದೂರಿದ್ದಾರೆ. ಸಂತ್ರಸ್ತರ ಹೇಳಿಕೆ ಪ್ರಕಾರ, ಆರೋಪಿಗಳು ಪಡೆದ ಹಣವನ್ನು ಯಾವುದೇ ಉದ್ಯೋಗ ವ್ಯವಸ್ಥೆಗೆ ಬಳಸದೆ, ತಮ್ಮ ಮೋಜು-ಮಸ್ತಿಗೆ, ವೈಯಕ್ತಿಕ ಖರ್ಚುಗಳಿಗೆ ಬಳಸಿಕೊಂಡಿದ್ದಾರೆ ಎಂದು ಆರೋಪಿಸಿದ್ದಾರೆ.

ವಂಚನೆ ಬಗ್ಗೆ ಅನುಮಾನ ವ್ಯಕ್ತವಾಗುತ್ತಿದ್ದಂತೆ, ಸಂತ್ರಸ್ತರು ಚಿಕ್ಕಬಳ್ಳಾಪುರ ಗ್ರಾಮಾಂತರ ಪೊಲೀಸ್ ಠಾಣೆಗೆ ದೂರು ನೀಡಿದ್ದಾರೆ. ದೂರು ದಾಖಲಾಗುತ್ತಿದ್ದಂತೆ ಪೊಲೀಸರು ತನಿಖೆ ಆರಂಭಿಸಿದ್ದು, ಆರೋಪಿಗಳ ವಿರುದ್ಧ ವಂಚನೆ ಪ್ರಕರಣ ದಾಖಲಿಸಿಕೊಂಡಿದ್ದಾರೆ. ಹಣದ ವಹಿವಾಟು, ಬ್ಯಾಂಕ್ ದಾಖಲೆಗಳು ಹಾಗೂ ಮೊಬೈಲ್ ಸಂಭಾಷಣೆಗಳ ಆಧಾರದಲ್ಲಿ ತನಿಖೆ ಮುಂದುವರಿದಿದೆ.

# ರಾಜ್ಯ ಸರ್ಕಾರದಿಂದ ಡ್ರೆಸ್ ಕೋಡ್ ಕಟ್ಟುನಿಟ್ಟು – ಜೀನ್ಸ್, ಸ್ಲೀವ್‌ಲೆಸ್ ನಿಷಿದ್ಧ

**ಬೆಂಗಳೂರು:** ಕರ್ನಾಟಕ ರಾಜ್ಯ ಸರ್ಕಾರವು ತನ್ನ ನೌಕರರ ಶಿಸ್ತು ಮತ್ತು ನಡವಳಿಕೆಗೆ ಸಂಬಂಧಿಸಿದಂತೆ ಅತ್ಯಂತ ಮಹತ್ವದ ನಿರ್ಧಾರವೊಂದನ್ನು ಕೈಗೊಂಡಿದೆ. ಇತ್ತೀಚಿನ ದಿನಗಳಲ್ಲಿ ಕಚೇರಿಗಳಲ್ಲಿ ನೌಕರರ ವಸ್ತ್ರಸಂಹಿತೆ ಮತ್ತು ಹಾಜರಾತಿಯಲ್ಲಿ ಕಂಡುಬರುತ್ತಿರುವ ಸಡಿಲಿಕೆಯನ್ನು ಗಂಭೀರವಾಗಿ ಪರಿಗಣಿಸಿರುವ ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆ ಕಟ್ಟುನಿಟ್ಟಾದ ಹೊಸ ಸುತ್ತೋಲೆಯನ್ನು ಹೊರಡಿಸಿದೆ. ಸರ್ಕಾರಿ ಕಚೇರಿ ಎನ್ನುವುದು ಸಾರ್ವಜನಿಕ ಸೇವಾ ಕೇಂದ್ರವಾಗಿದ್ದು, ಅಲ್ಲಿನ ನೌಕರರ ಉಡುಗೆ-ತೊಡುಗೆಗಳು ಗೌರವಯುತವಾಗಿರಬೇಕು ಎಂಬುದು ಸರ್ಕಾರದ ಆಶಯ. ಇತ್ತೀಚೆಗೆ ಕೆಲವು ಸಿಬ್ಬಂದಿಗಳು, ವಿಶೇಷವಾಗಿ ಕಿರಿಯ ವರ್ಗದ ನೌಕರರು, ಕಚೇರಿಗೆ ಹರಿದ ಜೀನ್ಸ್ ತೋಳಿಲ್ಲದ ಉಡುಪುಗಳು ಮತ್ತು ಅತ್ಯಂತ ಬಿಗಿಯಾದ ಬಟ್ಟೆಗಳನ್ನು ಧರಿಸಿ ಬರುತ್ತಿರುವುದು ಕಂಡುಬಂದಿದೆ.

ಇದು ಕಚೇರಿ ವಾತಾವರಣದ ಮೇಲೆ ನಕಾರಾತ್ಮಕ ಪರಿಣಾಮ ಬೀರುತ್ತಿದ್ದು, ಸಾರ್ವಜನಿಕರಿಂದಲೂ ಈ ಬಗ್ಗೆ ದೂರುಗಳು ಕೇಳಿಬಂದಿದ್ದವು. ಸರ್ಕಾರವು ನಿರ್ದಿಷ್ಟವಾದ ಸಮಸ್ತ್ರವನ್ನು ನಿಗದಿಪಡಿಸದಿದ್ದರೂ, ಸಭ್ಯ ಮತ್ತು ಸೌಮ್ಯ ಉಡುಗೆಯನ್ನು ಕಡ್ಡಾಯಗೊಳಿಸಿದೆ. ಪುರುಷ ನೌಕರರು ಪ್ಯಾಂಟ್ ಮತ್ತು ಶರ್ಟ್ ಧರಿಸಬೇಕು ಹಾಗೂ ಮಹಿಳಾ ನೌಕರರು ಸೀರೆ ಅಥವಾ ಚೂಡಿದಾರ್‌ನಂತಹ ಸಾಂಪ್ರದಾಯಿಕ ಉಡುಪುಗಳನ್ನು ಧರಿಸುವುದು ಸೂಕ್ತ ಎಂದು ಸೂಚಿಸಲಾಗಿದೆ. ಕಾಲೇಜು ವಿದ್ಯಾರ್ಥಿಗಳಂತೆ ಕ್ಯಾಶುಲ್ ಉಡುಗೆ ತೊಟ್ಟು ಬರುವುದು ಇನ್ನು ಮುಂದೆ ನಿಷೇಧಿಸಲಾಗಿದೆ. ಕೇವಲ ಉಡುಪಷ್ಟೇ ಅಲ್ಲದೆ, ಕೆಲಸದ ಅವಧಿಯ ಶಿಸ್ತಿಗೂ ಸರ್ಕಾರ ಆದ್ಯತೆ ನೀಡಿದೆ. ನಿಯಮದ ಪ್ರಕಾರ, ಎಲ್ಲಾ ನೌಕರರು ರೊಳಗೆ ಕಚೇರಿಗೆ ಹಾಜರಿರಬೇಕು.



ಕಚೇರಿ ಅವಧಿಯಲ್ಲಿ ಅಧಿಕೃತ ಕೆಲಸದ ಮೇಲೆ ಹೊರಗೆ ಹೋಗಬೇಕಾದ ಸಂದರ್ಭ ಎದುರಾದರೆ, ಅದನ್ನು 'ಚಲನೆ ರಿಜಿಸ್ಟರ್' ನಲ್ಲಿ ಕಡ್ಡಾಯವಾಗಿ ದಾಖಲಿಸಬೇಕು. ಯಾವುದೇ ದಾಖಲೆ ಇಲ್ಲದೆ ಸೀಟಿನಲ್ಲಿ ಇಲ್ಲದಿರುವುದು ಕರ್ತವ್ಯ ಲೋಪವೆಂದು ಪರಿಗಣಿಸಲಾಗುತ್ತದೆ. ಪಾರದರ್ಶಕತೆಯನ್ನು ಕಾಯ್ದುಕೊಳ್ಳಲು ಸರ್ಕಾರವು 'ನಗದು ಘೋಷಣೆ ರಿಜಿಸ್ಟರ್' ಅನ್ನು ಕಟ್ಟುನಿಟ್ಟಾಗಿ ಪಾಲಿಸುವಂತೆ ಸೂಚಿಸಿದೆ. ಕಚೇರಿಗೆ ಪ್ರವೇಶಿಸುವಾಗ ಮತ್ತು ನಿರ್ಗಮಿಸುವಾಗ ನೌಕರರು ತಮ್ಮ ಬಳಿ ಇರುವ ನಗದು ಮೊತ್ತವನ್ನು ದಾಖಲಿಸಬೇಕು. ಇದು ಅನಗತ್ಯ ಆಪಾದನೆಗಳಿಂದ ನೌಕರರನ್ನು ರಕ್ಷಿಸುವುದಲ್ಲದೆ, ಕಚೇರಿಯಲ್ಲಿ ಭ್ರಷ್ಟಾಚಾರ ತಡೆಯಲು ಸಹಕಾರಿಯಾಗಲಿದೆ. ಈ ಸುತ್ತೋಲೆಯನ್ನು ಕೇವಲ ಕಾಗದಕ್ಕಷ್ಟೇ ಸೀಮಿತಗೊಳಿಸದೆ ಪ್ರಾಯೋಗಿಕವಾಗಿ ಜಾರಿಗೆ ತರಲು ಇಲಾಖಾ ಮುಖ್ಯಸ್ಥರು, ಜಿಲ್ಲಾಧಿಕಾರಿಗಳು ಮತ್ತು ಜಿಲ್ಲಾ ಪಂಚಾಯತ್ ಸಿಇಒಗಳಿಗೆ ಸೂಚಿಸಲಾಗಿದೆ. ನಿಯಮ ಉಲ್ಲಂಘಿಸುವ ನೌಕರರ ವಿರುದ್ಧ ಮುಲಾಜಿಲ್ಲದೆ ಕ್ರಮ ಕೈಗೊಳ್ಳುವಂತೆ ಅಧಿಕಾರಿಗಳಿಗೆ ಸೂಚನೆ ನೀಡಲಾಗಿದೆ. ವಿಶೇಷವೆಂದರೆ, ಸರ್ಕಾರದ ಈ ಕಠಿಣ ನಡೆಯನ್ನು 'ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ' ಸ್ವಾಗತಿಸಿದೆ.

ಸಂಘದ ಅಧ್ಯಕ್ಷರಾದ ಸಿ.ಎಸ್. ಷಡಕ್ಷರಿ ಅವರು ಮಾತನಾಡಿ, ಸರ್ಕಾರಿ ನೌಕರರು ಸಮಾಜಕ್ಕೆ ಮಾದರಿಯಾಗಿರಬೇಕು. ಕಚೇರಿಯ ಘನತೆಯನ್ನು ಎತ್ತಿಹಿಡಿಯುವುದು ಪ್ರತಿಯೊಬ್ಬ ನೌಕರನ ಜವಾಬ್ದಾರಿ ಎಂದು ಹೇಳುವ ಮೂಲಕ ಶಿಸ್ತು ಪಾಲನೆಗೆ ಬೆಂಬಲ ಸೂಚಿಸಿದ್ದಾರೆ. ಈ ಹೊಸ ನಿಯಮಗಳು ಕೇವಲ ನಿರ್ಬಂಧಗಳಲ್ಲ, ಬದಲಿಗೆ ಸರ್ಕಾರಿ ವ್ಯವಸ್ಥೆಯ ಮೇಲಿನ ಸಾರ್ವಜನಿಕರ ವಿಶ್ವಾಸವನ್ನು ಹೆಚ್ಚಿಸುವ ನಿಟ್ಟಿನಲ್ಲಿ ಇಟ್ಟಿರುವ ಒಂದು ದೊಡ್ಡ ಹೆಜ್ಜೆಯಾಗಿದೆ.

# ಚಿನ್ನಸ್ವಾಮಿ ಪಂದ್ಯಕ್ಕೆ ಬ್ರೇಕ್ – ಪೊಲೀಸ್ ಸೂಚನೆ

**ಬೆಂಗಳೂರು:** ಸಿಲಿಕಾನ್ ಸಿಟಿಯ ಕ್ರಿಕೆಟ್ ಪ್ರೇಮಿಗಳಿಗೆ ಮತ್ತೆ ನಿರಾಸೆಯಾಗಿದೆ. ಬೆಂಗಳೂರಿನ ಎಂ. ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ನಡೆಯಬೇಕಿದ್ದ ದೆಹಲಿ ಮತ್ತು ಆಂಧ್ರಪ್ರದೇಶ ನಡುವಿನ ವಿಜಯ್ ಹಜಾರೆ ಟೂರ್ನಿಯ ಹೈವೋಲ್ಟೇಜ್ ಪಂದ್ಯಕ್ಕೆ ಅನುಮತಿ ನೀಡಲು ಬೆಂಗಳೂರು ಪೊಲೀಸರು ನಿರಾಕರಿಸಿದ್ದಾರೆ. ಟೀಮ್ ಇಂಡಿಯಾದ ಸ್ಟಾರ್ ಬ್ಯಾಟರ್ ವಿರಾಟ್ ಕೊಹ್ಲಿ ದೆಹಲಿ ಪರ ಕಣಕ್ಕಿಳಿಯಬೇಕಿದ್ದ ಈ ಪಂದ್ಯಕ್ಕೆ ಬ್ರೇಕ್ ಹಾಕಿದ್ದಾರೆ ಬೆಂಗಳೂರು ಪೊಲೀಸರು. ಭದ್ರತಾ ಪರಿಶೀಲನೆ ಮತ್ತು ಪೊಲೀಸರ ಆತಂಕ ಬೆಂಗಳೂರು ಪೊಲೀಸ್ ಆಯುಕ್ತರಾದ ಸೀಮಂತ್ ಕುಮಾರ್ ಸಿಂಗ್ ಮತ್ತು ಗ್ರೇಟರ್ ಬೆಂಗಳೂರು ಪ್ರಾಧಿಕಾರದ ಅಧಿಕಾರಿಗಳು ಕ್ರೀಡಾಂಗಣಕ್ಕೆ ಭೇಟಿ ನೀಡಿ ಕ್ರೀಡಾಂಗನವನ್ನ ಸಂಪೂರ್ಣ ಪರಿಶೀಲನೆ ನಡೆಸಿದ್ದಾರೆ. ಈ ಬಗ್ಗೆ ಅಗ್ನಿಶಾಮಕ ದಳದ ಅಧಿಕಾರಿಗಳು ಕೂಡ ಸುರಕ್ಷತಾ ಮಾನದಂಡಗಳ ಬಗ್ಗೆ ವರದಿ ಸಲ್ಲಿಸಿದ್ದರು. ಈ ವರದಿಗಳನ್ನು ಆಧರಿಸಿ, ಪ್ರಸ್ತುತ ಕ್ರೀಡಾಂಗಣವು ದೊಡ್ಡ ಮಟ್ಟದ ಜನಸಂದಣಿಯನ್ನು ನಿಭಾಯಿಸಲು ಸಿದ್ಧವಿಲ್ಲ ಎಂದು ಪೊಲೀಸರು ತಿಳಿಸಿದ್ದಾರೆ. ನಾಳೆಯ ಪಂದ್ಯದಲ್ಲಿ ವಿರಾಟ್ ಕೊಹ್ಲಿ ಆಡಲಿರುವುದರಿಂದ, ಸ್ಟೇಡಿಯಂ ಹೊರಭಾಗದಲ್ಲಿ ಸಾವಿರಾರು ಅಭಿಮಾನಿಗಳು ಜಮಾಯಿಸುವ ಸಾಧ್ಯತೆಯಿದೆ. ಇದನ್ನು ನಿಯಂತ್ರಿಸುವುದು ಪೊಲೀಸರಿಗೆ ಸವಾಲಾಗಲಿದೆ. ಕಳೆದ ಜೂನ್‌ನಲ್ಲಿ ಆರ್‌ಸಿಬಿ ವಿಜಯೋತ್ಸವದ ವೇಳೆ ಸಂಭವಿಸಿದ ಕಾಲ್ತುಳಿತದಲ್ಲಿ 11 ಮಂದಿ ಪ್ರಾಣ ಕಳೆದುಕೊಂಡಿದ್ದರು. ಈ ಘಟನೆಯ ನಂತರ ಸುರಕ್ಷತೆಯ ವಿಷಯದಲ್ಲಿ ಸರ್ಕಾರ ಯಾವುದೇ ರಿಸ್ಕ್ ತೆಗೆದುಕೊಳ್ಳಲು ಸಿದ್ಧವಿಲ್ಲ. ಕ್ರೀಡಾಂಗಣದ ಗೇಟ್‌ಗಳು ಕಿರಿದಾಗಿರುವುದು ಮತ್ತು ಜನರ ಸಂಚಾರಕ್ಕೆ ಪೂರಕವಾದ ವಾತಾವರಣ ಇಲ್ಲ. ಹೀಗಾಗಿ ಗೇಟ್ ಅಗಲೀಕರಣವಾಗುವವರೆಗೆ ಅನುಮತಿ ನೀಡುವುದು ಕಷ್ಟ ಎಂದು ಪೊಲೀಸರು ತಿಳಿಸಿದ್ದಾರೆ. ಕೆಎಸ್‌ಸಿಎ ಮನವಿ ಮತ್ತು ಪರಮೇಶ್ವರ್ ಭೇಟಿ ಪಂದ್ಯವನ್ನು ರದ್ದುಗೊಳಿಸುವುದಕ್ಕೆ ಕರ್ನಾಟಕ ರಾಜ್ಯ ಕ್ರಿಕೆಟ್ ಸಂಸ್ಥೆ (KSCA) ಮುಖ್ಯಸ್ಥ ವೆಂಕಟೇಶ್ ಪ್ರಸಾದ್ ಗೃಹ ಸಚಿವ ಜಿ. ಪರಮೇಶ್ವರ್ ಅವರನ್ನು ಭೇಟಿ ಮಾಡಿ ಮಾತುಕತೆ ನಡೆಸಿದ್ದಾರೆ. ಕನಿಷ್ಠ ಪಕ್ಷ ಪ್ರೇಕ್ಷಕರಿಲ್ಲದೆ ಪಂದ್ಯ ಆಯೋಜಿಸಲು ಅವಕಾಶ ಕೊಡಿ ಎಂದು ಮನವಿ ಮಾಡಿದ್ದಾರೆ.

# ರಾಹುಲ್ ಗಾಂಧಿಗೆ ಕೆ.ಎನ್.ರಾಜಣ್ಣ ಪತ್ರ, ಸಿಎಂ ಸಿದ್ದರಾಮಯ್ಯ ಪರ ಬ್ಯಾಟಿಂಗ್

**ಬೆಂಗಳೂರು:** ಮಾಜಿ ಸಚಿವ ಕೆ.ಎನ್.ರಾಜಣ್ಣ ಎಐಸಿಸಿ ನಾಯಕ ರಾಹುಲ್ ಗಾಂಧಿ ಭೇಟಿಗೆ ಮನವಿ ಮಾಡಿ ಪತ್ರ ಬೇರೆದಿದ್ದಾರೆ. ತಾವು ಸಚಿವ ಸ್ಥಾನ ಕಳೆದುಕೊಂಡ ಬಳಿಕ ರಾಹುಲ್ ಗಾಂಧಿ ಭೇಟಿಗೆ ಸತತ ಯತ್ನ ಮಾಡಿದ್ದರೂ, ಅದು ಸಾಧ್ಯವಾಗದ ಕಾರಣ ರಾಹುಲ್ ಗಾಂಧಿಗೆ 8 ಪುಟಗಳ ಸುದೀರ್ಘ ಪತ್ರ ಬರೆದಿದ್ದಾರೆ. ಅದರಲ್ಲಿ ರಾಜ್ಯ ರಾಜಕಾರಣದ ಅನೇಕ ಮಹತ್ವದ ವಿಚಾರಗಳ ಬಗ್ಗೆ ಪ್ರಸ್ತಾಪಿಸಿದ್ದಾರೆ.





ಮಾಜಿ ಸಚಿವ ಕೆ.ಎನ್. ರಾಜಣ್ಣ ರಾಹುಲ್ ಗಾಂಧಿಗೆ 8 ಪುಟಗಳ ಸುದೀರ್ಘ ಪತ್ರ ಬರೆದಿದ್ದಾರೆ. ಪತ್ರದಲ್ಲಿ ಅಹಿಂದ ನಾಯಕ ಸಿದ್ದರಾಮಯ್ಯ ನೇತೃತ್ವದಲ್ಲಿ 2013 ಹಾಗೂ 2023ರಲ್ಲಿ ಕಾಂಗ್ರೆಸ್ ಅಧಿಕಾರಕ್ಕೆ ಬಂದಿದೆ. ಸಿದ್ದರಾಮಯ್ಯ ಎಸ್‌ಸಿ-ಎಸ್‌ಟಿ, ಓಬಿಸಿ ಅಲ್ಪಸಂಖ್ಯಾತರು, ಬಡವರು ಸೇರಿ ಎಲ್ಲರ ಏಳಿಗೆಗಾಗಿ ಕೆಲಸ ಮಾಡ್ತಿದ್ದಾರೆ ಎಂದು ಸಿಎಂ ಪರ ಉಲ್ಲೇಖಿಸಿದ್ದಾರೆ. ಇನ್ನೂ ಇದೇ ಪತ್ರದಲ್ಲಿ ಡಿಸಿಎಂ ಡಿ.ಕೆ.ಶಿವಕುಮಾರ್ ವಿರುದ್ಧವೂ ನೇರಾ ನೇರವಾಗಿ ಆರೋಪಿಸಿದ್ದಾರೆ. ಬಿಎಲ್‌ಆರ್‌ಗಳು ಸರಿಯಾಗಿ ಕೆಲಸ ಮಾಡಿದ್ದಿದ್ದರೆ ಲೋಕಸಭೆಯಲ್ಲಿ ಇನ್ನೂ 8-10 ಸೀಟ್ ಗೆಲ್ಲುತ್ತಿದ್ವಿ. ಬೇರೆ ರಾಜ್ಯಗಳಿಂದಲೂ 30-40 ಸೀಟ್ ಗೆಲ್ಲಬಹುದಿತ್ತು ಎಂದು ಬಿಎಲ್‌ಆರ್‌ಗಳನ್ನು ನೇಮಕ ಮಾಡಿರುವುದು ಅವರ ನೇಮಕ ಸರಿಯಾಗಿದ್ದರೆ, ವೋಟ್ ಚೋರಿ ಆಗುತ್ತಿರಲಿಲ್ಲ. ಬಿಎಲ್‌ಆರ್‌ಗಳು ಹಾಗೂ ಕೆಪಿಸಿಸಿ ಅಧ್ಯಕ್ಷರು ಈ ಬಗ್ಗೆ ಸರಿಯಾದ ಗಮನ ಹರಿಸಿಲ್ಲ.


ಹೀಗಾಗಿ, ಕರ್ನಾಟಕದಲ್ಲಿ ವೋಟ್ ಚೋರಿಗೆ ಅವಕಾಶ ಆಗಿದೆ ಎಂದು ಡಿಕೆಶಿ ವಿರುದ್ಧ ಆರೋಪಿಸಿದ್ದಾರೆ. ಈ ಬಗ್ಗೆ ಮಾತನಾಡಿದ ಮಾಜಿ ಸಂಸದ ಡಿ.ಕೆ.ಸುರೇಶ್ ಅದು ಅವರ ಪ್ರತಿಪಾದನೆ ಅವರ ವಿಚಾರ ಎಂದಿದ್ದಾರೆ. ರಾಜಣ್ಣ ತಮ್ಮ ಪತ್ರದಲ್ಲಿ ರಾಹುಲ್ ಗಾಂಧಿ ಭೇಟಿಗೆ ಅವಕಾಶ ಕೇಳಿದ್ದು, ಏನು ತಪ್ಪು ಮಾಡದೆ ನನ್ನ ಸಚಿವ ಸ್ಥಾನ ಕಳೆದುಕೊಂಡಿದ್ದೇನೆ ಎಂದು ಪ್ರಸ್ತಾಪಿಸಿದ್ದಾರೆ. ನಾನು ಯಾವುದೇ ಭ್ರಷ್ಟಾಚಾರ ಮಾಡದೇ ಎರಡು ವರ್ಷ ಸಚಿವನಾಗಿ ಕೆಲಸ ಮಾಡಿದ್ದೇನೆ. ಸಹಕಾರ ಕ್ಷೇತ್ರದಲ್ಲಿ ಮೀಸಲಾತಿ ತಂದಿದ್ದೇನೆ ಎಸ್‌ಸಿ-ಎಸ್‌ಟಿ ಮಹಿಳಾ ಮೀಸಲಾತಿ ತಂದಿದ್ದೇನೆ. ಇದರಿಂದ ರಾಜ್ಯಾದ್ಯಂತ ಒಂದು ಲಕ್ಷ ಕಾರ್ಯಕರ್ತರಿಗೆ ಅನುಕೂಲವಾಗಿದೆ. ಹಾಸನ ಉಸ್ತುವಾರಿಯಾಗಿ ಹಳೇ ಮೈಸೂರು ಭಾಗದಲ್ಲಿ ಹಾಸನ ಗೆಲ್ಲುವಂತೆ ಕೆಲಸ ಮಾಡಿದ್ದೇನೆ. ನಾನು ನೆಹರೂ ಫ್ಯಾಮಿಲಿಗೆ ನಿಷ್ಠೆಯಿಂದ ಇದ್ದೇನೆ. ನಾನು ಈ ಪತ್ರ ಬರೆದ ಉದ್ದೇಶ ಇಷ್ಟೇ. ನನ್ನ ವಿರುದ್ಧ ತಮಗೆ ತಪ್ಪು ಮಾಹಿತಿ ನೀಡಿದವರ ಮೇಲೆ ಕ್ರಮ ಆಗಬೇಕು. ನನ್ನ ಹೇಳಿಕೆಯ ಉದ್ದೇಶವನ್ನ ತಮಗೆ ತಪ್ಪಾಗಿ ಅರ್ಥೈಸುವಂತೆ ಮಾಡಿದವರ ಮೇಲೆ ಕ್ರಮ ಆಗಬೇಕು. ಜೊತೆಗೆ ಈ ಬಗ್ಗೆ ಕೂಲಂಕಷವಾಗಿ ಚರ್ಚಿಸಲು ತಮ್ಮ ಭೇಟಿಗೆ ಅವಕಾಶ ನೀಡಿ ಎಂದು ಮನವಿ ಮಾಡಿದ್ದಾರೆ. ಸಚಿವ ಸ್ಥಾನದಿಂದ ವಜಾ ಬಳಿಕ ರಾಹುಲ್ ಗಾಂಧಿಗೆ ಕೆಎನ್ ರಾಜಣ್ಣ ಪತ್ರ ಬರೆದಿದ್ದಾರೆ. ತನ್ನ ಹೇಳಿಕೆಯ ಕುರಿತು ಸ್ಪಷ್ಟೀಕರಣ ನೀಡಿ ಕಳೆದ ತಿಂಗಳ 17 ರಂದು ಪತ್ರ ಬರೆದಿದ್ದಾರೆ. ಮಾಧ್ಯಮದವರ ಪ್ರಶ್ನೆ ಹಾಗೂ ಉತ್ತರ ಎರಡನ್ನೂ ಉಲ್ಲೇಖಿಸಿ ಸುಮಾರು 8 ಪುಟಗಳ ಪತ್ರ ಬರೆದಿದ್ದಾರೆ.

ಕೆ.ಎನ್ ರಾಜಣ್ಣ ನನ್ನ ಹೇಳಿಕೆಯ ಹಿಂದಿರುವ ಸತ್ಯ ಹಾಗೂ ಅದನ್ನು ತಿರುಚಿದ ಬಗ್ಗೆ ನಿಮ್ಮ ಮುಂದಿಟ್ಟಿದ್ದೇನೆ. ನನ್ನ ಹೇಳಿಕೆಯನ್ನು ತಪ್ಪಾಗಿ ನಿಮ್ಮ ಮುಂದೆ ತಂದವರ ಮೇಲೆ ಕ್ರಮ ಕೈಗೊಳ್ಳಿ. ಜೊತೆಗೆ ಈ ಬಗ್ಗೆ ಮಾತನಾಡಲು ಅವಕಾಶ ನೀಡುವಂತೆ ಪತ್ರದಲ್ಲಿ ಮನವಿ ಮಾಡಿದ್ದಾರೆ. ಆದರೆ, ಪವರ್ ಶೇರಿಂಗ್‌ನ ನಿರ್ಣಾಯಕ ಹಂತದಲ್ಲಿ ಸಿಎಂ ಪರವಾಗಿ ಡಿಸಿಎಂ ಡಿಕೆಶಿ ವಿರುದ್ಧವಾಗಿ ರಾಜಣ್ಣ ಪತ್ರ ಬರೆದಿದ್ದಾರೆ.

# ಹೊಸ ವರ್ಷಕ್ಕೆ ಬಸ್ ಬ್ರೇಕ್ ಸಾರಿಗೆ ನೌಕರರ ಮುಷ್ಕರ ಸಿದ್ಧತೆ

**ಬೆಂಗಳೂರು:** ಹೊಸ ವರ್ಷದ ಆರಂಭದಲ್ಲೇ ಮುಷ್ಕರಕ್ಕೆ ಸಾರಿಗೆ ನೌಕರರು ಸದ್ದಿಲ್ಲದೇ ಸಿದ್ಧತೆ ನಡೆಸಿದ್ದಾರೆ. ಮೆಜೆಸ್ಟಿಕ್ ಬಿಎಂಟಿಸಿ ಬಸ್ ನಿಲ್ದಾಣದಲ್ಲಿ ಕರಪತ್ರಗಳ ವಿತರಣೆಯ ಮೂಲಕ ತಮ್ಮ ಬೇಡಿಕೆಗಳನ್ನು ಮುಂದಿಟ್ಟಿರುವ ನೌಕರರು, ಸರ್ಕಾರದ ಭರವಸೆಗಳು ಈಡೇರದಿದ್ದರೆ ಜನವರಿ ಮೊದಲ ವಾರದಲ್ಲಿ ಮುಷ್ಕರ ಅನಿವಾರ್ಯ ಎಂದು ಎಚ್ಚರಿಕೆ ನೀಡಿದ್ದಾರೆ. ರಾಜ್ಯಾದ್ಯಂತ ಎಲ್ಲ ಬಸ್ ಸೇವೆಗಳನ್ನು ಸ್ಥಗಿತಗೊಳಿಸುವಂತಹ ದೊಡ್ಡ ಪ್ರಮಾಣದ ಪ್ರತಿಭಟನೆಯಾಗಲಿದೆ ಎಂದು ಅಖಿಲ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನೌಕರರ ಮಹಾಮಂಡಳಿಯ ಮಹಾ ಪ್ರಧಾನ ಕಾರ್ಯದರ್ಶಿ ಬಿ. ಜಯದೇವರಾಜೇ ಅರಸ್ ಹೇಳಿದ್ದಾರೆ.

ಈ ಮುಷ್ಕರದ ಹಿನ್ನೆಲೆ ನೌಕರರ ಮುಖ್ಯ ಬೇಡಿಕೆಯು 38 ತಿಂಗಳ ಹಿಂಬಾಕಿ ವೇತನ ಪಾವತಿ ಮತ್ತು ವೇತನ ಪರಿಷ್ಕರಣೆಯಾಗಿದೆ. ಪ್ರತಿ ನಾಲ್ಕು ವರ್ಷಗಳಿಗೊಮ್ಮೆ ನಡೆಯುವ ವೇತನ ಪರಿಷ್ಕರಣೆಯ ಪದ್ಧತಿಯು ಈಗ ಸರ್ಕಾರದ ನಿರ್ಲಕ್ಷ್ಯಕ್ಕೆ ತುತ್ತಾಗಿದೆ. ಈ ಹಿಂದೆ 2012-2016 ಮತ್ತು 2016-2020 ಅವಧಿಗಳಲ್ಲಿ ವೇತನ ಹೆಚ್ಚಳವನ್ನು ಅದರದ್ದೇ ವರ್ಷದಿಂದ ಜಾರಿಗೆ ತರಲಾಗಿತ್ತು. ಆದರೆ 2023ರಲ್ಲಿ ಬಿಜೆಪಿ ಸರ್ಕಾರ ನೀಡಿದ ಆದೇಶದಲ್ಲಿ 2023ರ ಮಾರ್ಚ್ 1ರಿಂದ ಮಾತ್ರ ಜಾರಿಗೆ ಬರುವಂತೆ ಉಲ್ಲೇಖಿಸಲಾಗಿದೆ. 2020ರಿಂದಲೇ ಜಾರಿಗೆ ತರಬೇಕು ಎಂಬ ನೌಕರರ ಬೇಡಿಕೆಯನ್ನು ಸರ್ಕಾರ ನಿರಾಕರಿಸಿದೆ. ಇದರಿಂದಾಗಿ ಮುಂದಿನ ನಾಲ್ಕು ವರ್ಷಗಳವರೆಗೆ (2027ರವರೆಗೆ) ಪರಿಷ್ಕರಣೆ ಸಾಧ್ಯವಿಲ್ಲ ಎಂಬ ವಾದವನ್ನು ಮುಂದಿಟ್ಟಿದೆ. ಕೋವಿಡ್-19 ಮಹಾಮಾರಿಯು ಈ ಸಮಸ್ಯೆಯ ಮೂಲ ಕಾರಣವಾಗಿದೆ. 2020ರಲ್ಲಿ ಲಾಕ್‌ಡೌನ್ ಕಾರಣದಿಂದ ಬಸ್ ಸೇವೆಗಳು ಕೆಲ ತಿಂಗಳುಗಳ ಕಾಲ ಸಂಪೂರ್ಣವಾಗಿ ಸ್ಥಗಿತಗೊಂಡಿದ್ದವು. ನಂತರ ಸೇವೆಗಳು ಆರಂಭವಾದರೂ ಪ್ರಯಾಣಿಕರ ಸಂಖ್ಯೆ ಕಡಿಮೆಯಾಗಿ ಸಾರಿಗೆ ಇಲಾಖೆ ಆರ್ಥಿಕ ಸಂಕಷ್ಟಕ್ಕೆ ಸಿಲುಕಿತ್ತು. ಆದರೂ ಸರ್ಕಾರ ನಾಲ್ಕು ಸಾರಿಗೆ ಸಂಸ್ಥೆಗಳ (ಬಿಎಂಟಿಸಿ,



ಕೆಎ ಸ್‌ಆರ್‌ಟಿಸಿ, ಎನ್‌ಡಬ್ಲ್ಯೂಕೆಆರ್‌ಟಿಸಿ ಮತ್ತು ಎನ್‌ಇಕೆಆರ್‌ಟಿಸಿ) ನೌಕರರ ವೇತನ ಮತ್ತು ಭತ್ಯೆಗಳನ್ನು ಪಾವತಿ ಮಾಡಿತ್ತು. ಆದರೆ ವೇತನ ಪರಿಷ್ಕರಣೆಯನ್ನು ಮಾತ್ರ ಕೈಗೊಳ್ಳಲಿಲ್ಲ. ಕೋವಿಡ್ ನಂತರ 2023ರಲ್ಲಿ ಬಿಜೆಪಿ ಸರ್ಕಾರ ವೇತನ ಹೆಚ್ಚಳ ಘೋಷಿಸಿತ್ತು.

ಆದರೆ ಅದನ್ನು 2023ರಿಂದ ಮಾತ್ರ ಜಾರಿಗೆ ತಂದಿತ್ತು. ಕಾಂಗ್ರೆಸ್ ಸರ್ಕಾರದ ಅಧಿಕಾರಕ್ಕೆ ಬಂದ ನಂತರ ಈ ಸಮಸ್ಯೆ ಮತ್ತಷ್ಟು ಹೆಚ್ಚಾಗಿದೆ. ನೌಕರರು ಪ್ರತಿಭಟನೆ ನಡೆಸಿದಾಗ ಬೆಳಗಾವಿ ಅಧಿವೇಶನದ ಬಳಿಕ ಭರವಸೆ ನೀಡಲಾಯಿತು. ಆದರೆ ಇದುವರೆಗೂ ಯಾವುದೇ ಕ್ರಮ ಕೈಗೊಳ್ಳಲಿಲ್ಲ.

ನೌಕರರ ವಾದವೇನೆಂದರೆ, ಸರ್ಕಾರದ ಶಕ್ತಿ ಯೋಜನೆಯಡಿ ಮಹಿಳೆಯರಿಗೆ ಉಚಿತ ಬಸ್ ಪ್ರಯಾಣ ನೀಡಲಾಗಿದೆ, ಇದರಿಂದ ಪ್ರಯಾಣಿಕರ ಸಂಖ್ಯೆ ಭಾರೀಯಾಗಿ ಹೆಚ್ಚಳಗೊಂಡಿದೆ.

ಈ ಯೋಜನೆಯಡಿ 500 ಕೋಟಿ ಮಹಿಳಾ ಪ್ರಯಾಣಿಕರು ಫಲಾನುಭವಿಗಳಾಗಿದ್ದಾರೆ, ಇದು ಐತಿಹಾಸಿಕ ಮೈಲಿಗಲ್ಲು. ಉಚಿತ ಟಿಕೆಟ್‌ಗಳ ಹೊರತಾಗಿಯೂ ನಿರ್ವಾಹಕರು ಟಿಕೆಟ್ ಹರಿಯುತ್ತಾರೆ ಮತ್ತು ಸರ್ಕಾರ ಆ ಹಣವನ್ನು ಸಾರಿಗೆ ಸಂಸ್ಥೆಗಳಿಗೆ ಪಾವತಿ ಮಾಡಬೇಕು. ಇದರಿಂದ ಸಾರಿಗೆ ಸಂಸ್ಥೆಗಳ ಆದಾಯ ಗಣನೀಯವಾಗಿ ಏರಿಕೆಯಾಗಿದೆ. ಬಿಜೆಪಿ ಸರ್ಕಾರದ ಅವಧಿಯಲ್ಲಿ ಮಹಿಳೆಯರಿಗೆ ಉಚಿತ ಪ್ರಯಾಣ ಇರಲಿಲ್ಲ, ಮತ್ತು ಪ್ರಯಾಣಿಕರ ಸಂಖ್ಯೆ ಕಡಿಮೆಯಿತ್ತು. ಆದರೆ ಈಗ ಶಕ್ತಿ ಯೋಜನೆಯಿಂದ ಬಸ್‌ಗಳು ಭರ್ತಿಯಾಗುತ್ತಿವೆ, ಆದಾಯ ಹೆಚ್ಚಳವಾಗಿದೆ. ಆದರೂ ಸರ್ಕಾರ ನೌಕರರ ವೇತನ ಪರಿಷ್ಕರಣೆಗೆ ಮುಂದಾಗಿಲ್ಲ. ಇದು ಅನ್ಯಾಯವೆಂದು ನೌಕರರು ಆರೋಪಿಸುತ್ತಿದ್ದಾರೆ.

# ತಂಗಿಯ ಮದುವೆಗೆ ಭಿಕ್ಷುಕರನ್ನೇ ಅತಿಥಿಗಳಾಗಿ ಕರೆಸಿದ ಅಣ್ಣ

ಉತ್ತರ ಪ್ರದೇಶದ ಗಾಜಿಪುರ ಜಿಲ್ಲೆಯಲ್ಲಿ ನಡೆದ ಒಂದು ವಿವಾಹ ಸಮಾರಂಭ ಇಡೀ ದೇಶದ ಗಮನ ಸೆಳೆದಿದೆ. ಮದುವೆ ಅದ್ದೂರಿ ಅಲಂಕಾರಕ್ಕಾಗಿ ಅಥವಾ ಸೆಲೆಬ್ರಿಟಿ ಅತಿಥಿಗಳಿಗಾಗಿ ಸುದ್ದಿಯಾಗಿಲ್ಲ, ಬದಲಿಗೆ ಅದರಲ್ಲಿದ್ದ ಮಾನವೀಯ ಮೌಲ್ಯಗಳು ಮತ್ತು ಕರುಣೆಯ ಸಂದೇಶಕ್ಕಾಗಿ ವೈರಲ್ ಆಗಿದೆ. ಈ ಮದುವೆ, ಸಾಮಾಜಿಕ ಜಾಲತಾಣಗಳಲ್ಲಿ ವೈರಲ್ ಆಗಿರುವ ಹೃದಯಸ್ಪರ್ಶಿ ವೀಡಿಯೋದ ಮೂಲಕ ಎಲ್ಲರ ಮನಗೆದ್ದಿದೆ. ಸಾಮಾನ್ಯವಾಗಿ ಮದುವೆ ಎಂದರೆ ದುಬಾರಿ ಅಲಂಕಾರ, ಸಾವಿರಾರು ಜನರ ಅತಿಥಿ ಪಟ್ಟಿ, ಐಷಾರಾಮಿ ಊಟೋಪಚಾರಗಳು ಎಂಬುದೇ ನೆನಪಿಗೆ ಬರುತ್ತದೆ.

ಆದರೆ ಗಾಜಿಪುರದ ಸಿದ್ದಾರ್ಥ್ ರೈ ಎಂಬ ಯುವಕ, ಈ ಪರಂಪರೆಯ ಚೌಕಟ್ಟನ್ನು ಮೀರಿ, ತನ್ನ ತಂಗಿಯ ವಿವಾಹವನ್ನು ಅತ್ಯಂತ ಅರ್ಥಪೂರ್ಣ ಹಾಗೂ ಮಾನವೀಯ ರೀತಿಯಲ್ಲಿ ಆಚರಿಸಿ ಮಾದರಿಯಾಗಿದ್ದಾರೆ. ಸಿದ್ದಾರ್ಥ್ ರೈ ತಮ್ಮ ಸಹೋದರಿಯ ಮದುವೆಯನ್ನು ಕೇವಲ ಕುಟುಂಬದ ಸಂಭ್ರಮಕ್ಕೆ ಸೀಮಿತಗೊಳಿಸದೆ, ಸಮಾಜದಿಂದ ನಿರ್ಲಕ್ಷಿಸಲ್ಪಟ್ಟ ಭಿಕ್ಷುಕರು ಹಾಗೂ ನಿರಾಶ್ರಿತರಿಗೆ ಗೌರವದ ಸ್ಥಾನ ನೀಡಬೇಕೆಂದು ನಿರ್ಧರಿಸಿದರು. ಹೀಗಾಗಿ, ಗಾಜಿಪುರ ಜಿಲ್ಲೆಯ ವಿವಿಧ ಭಾಗಗಳಿಂದ ಭಿಕ್ಷುಕರು ಮತ್ತು ಬೀದಿಯಲ್ಲಿ ಬದುಕುತ್ತಿರುವವರನ್ನು ಮದುವೆ ಸಮಾರಂಭಕ್ಕೆ ವಿಶೇಷ ಅತಿಥಿಗಳಾಗಿ ಆಹ್ವಾನಿಸಲಾಯಿತು. ಈ ಅತಿಥಿಗಳನ್ನು ಮದುವೆ ಸ್ಥಳಕ್ಕೆ ವಾಹನಗಳಲ್ಲಿ ಕರೆತಂದು, ಕುಟುಂಬ ಸದಸ್ಯರಂತೆ ಆತ್ಮೀಯವಾಗಿ ಸ್ವಾಗತಿಸಲಾಯಿತು. ಅವರು ಮದುವೆಯ ಮುಖ್ಯ ಅತಿಥಿಗಳಂತೆ ಗೌರವಪೂರ್ವಕವಾಗಿ ಕೂರಿಸಲಾಯಿತು. ಮದುವೆ ಔತಣದ ಸಂಪೂರ್ಣ ಊಟ, ಸಿಹಿ, ಪಾನೀಯಗಳು ಎಲ್ಲವೂ ಅವರಿಗೆ ದೊರೆಯಿತು. ಸಂಗೀತ, ನೃತ್ಯ ಮತ್ತು ಸಂಭ್ರಮದ ಕ್ಷಣಗಳಲ್ಲಿ ಅವರು ಕೂಡ ಭಾಗವಹಿಸಿ, ಆ ಕ್ಷಣವನ್ನು ಸಂಪೂರ್ಣವಾಗಿ ಅನುಭವಿಸಿದರು.

ಅನೇಕ ಭಿಕ್ಷುಕರು ಈ ಅನುಭವವನ್ನು ಜೀವನದಲ್ಲೇ ಮೊದಲ ಬಾರಿ ಸಿಕ್ಕ ಗೌರವವೆಂದು ಹೇಳಿಕೊಂಡಿದ್ದಾರೆ. ಕೆಲವರ ಕಣ್ಣಲ್ಲಿ ಸಂತೋಷದ ಕಣ್ಣೀರು ಮೂಡಿದ್ದು, ಈ ಸಮಾರಂಭ ಕೇವಲ ಒಂದು ಮದುವೆಯಾಗಿರದೆ, ಅವರ ಆತ್ಮಸ್ಥೈರ್ಯವನ್ನು ಹೆಚ್ಚಿಸಿದ ಕ್ಷಣವಾಗಿತ್ತು. ಸಮಾರಂಭ ಮುಕ್ತಾಯವಾದ ಬಳಿಕವೂ, ಅತಿಥಿಗಳಿಗೆ ಗೌರವಯುತ ಬೀಳ್ಕೊಡುಗೆ ನೀಡಲಾಯಿತು. ಈ ಮದುವೆಯ ವೀಡಿಯೋ ಸಾಮಾಜಿಕ ಜಾಲತಾಣಗಳಲ್ಲಿ ವೈರಲ್ ಆಗುತ್ತಿದ್ದಂತೆ, ಲಕ್ಷಾಂತರ ಮಂದಿ ಸಿದ್ದಾರ್ಥ್ ರೈ ಅವರ ಈ ಕಾರ್ಯಕ್ಕೆ ಶ್ಲಾಘನೆ ವ್ಯಕ್ತಪಡಿಸಿದ್ದಾರೆ. ಹಲವರು "ಇದು ನಿಜವಾದ ಶ್ರೀಮಂತಿಕೆಯ ಉದಾಹರಣೆ", "ಇಂತಹ ಮದುವೆಗಳು ಸಮಾಜಕ್ಕೆ ಬೇಕು" ಎಂದು ಪ್ರತಿಕ್ರಿಯಿಸಿದ್ದಾರೆ.

# ಕಬ್ಬಿನ ಹಣ ನೀಡಿದೇ ಕಾರ್ಖಾನೆ ಮಾಲೀಕರ ಕಳ್ಳಾಟ: ರೈತರ ಬೆನ್ನಿಗೆ ನಿಂತ ಡಿಸಿ

ಬೀದರ್: ಕಬ್ಬು ಬೆಳೆದು ಖುಷಿಯಿಂದ ಸಕ್ಕರೆ ಕಾರ್ಖಾನೆಗೆ ರೈತರು ಕಬ್ಬು ಹಾಕುತ್ತಿದ್ದಾರೆ. ಆದರೆ ರೈತರಿಗೆ ಸಕ್ಕರೆ ಕಾರ್ಖಾನೆಯಿಂದ ಬರಬೇಕಾದ ಹಣ ಮಾತ್ರ ಸಮಯಕ್ಕೆ ಸರಿಯಾಗಿ ಕೈ ಸೇರುತ್ತಿಲ್ಲ. ವರ್ಷವಿಡೀ ಕಷ್ಟಪಟ್ಟು ಬೆಳೆದ ಕಬ್ಬನ್ನ ಕಾರ್ಖಾನೆಗೆ ಹಾಕಿದರೆ ಕಾರ್ಖಾನೆಯ ಮಾಲೀಕರು ಮಾತ್ರ ರೈತರಿಗೆ ಹಣ ಕೊಡದೇ ಸತಾಯಿಸುತ್ತಿದ್ದಾರೆ. ಇದನ್ನ ಪ್ರಶ್ನಿಸಬೇಕಾದ ಅಧಿಕಾರಿಗಳು ಮಾತ್ರ ಕಂಡುಕಾಣದಂತೆ ಕುಳಿತಿದ್ದು, ರೈತರ ಆಕ್ರೋಶ ಹೆಚ್ಚಿಸುವಂತೆ ಮಾಡಿದೆ. ಬೀದರ್ ಜಿಲ್ಲೆಯಲ್ಲಿರುವ ಐದು ಸಕ್ಕರೆ ಕಾರ್ಖಾನೆಗಳಿಂದ ಪ್ರಸಕ್ತ ಹಂಗಾಮು ವರ್ಷದಲ್ಲಿ ಕೋಟ್ಯಂತರ ರೂ ಹಣ ರೈತರ ಕೈ ಸೇರಬೇಕಾಗಿದೆ. ಕಾರ್ಖಾನೆಯ ಮಾಲೀಕರು ಕೆಲವು ರೈತರಿಗೆ ಮಾತ್ರ ಹಣನ್ನ ಹಾಕಿ ಸುಮ್ಮನಾಗಿದ್ದು, ಇತರರಿಗೆ ಹಣ ಬಾರದಿರುವುದರಿಂದ ಸಾಲ ಮಾಡಿ ಜೀವನ ನಡೆಸಬೇಕಾದ ಸ್ಥಿತಿ ರೈತರದ್ದಾಗಿದೆ.



ಸಾಲ ಸೂಲಾ ಮಾಡಿ ಬೆಳೆದ ಕಬ್ಬನ್ನ ಮಾರಾಟ ಮಾಡಿದರೇ ಅದರ ಹಣವನ್ನ ಮಾತ್ರ ರೈತರಿಗೆ ಕೊಡುತ್ತಿಲ್ಲ. ಹೀಗಾಗಿ ರೈತರು ಮಾತ್ರ ಕಬ್ಬಿನ ಹಣ ಬರುತ್ತದೆ ಎಂದು ಮತ್ತೆ ಸಾಲ ಮಾಡಿಕೊಂಡು ಹೊಟ್ಟೆ ತುಂಬಿಸಿಕೊಳ್ಳುತ್ತಿದ್ದಾರೆ. ಸಕ್ಕರೆ ಕಾರ್ಖಾನೆಗಳಿಗೆ ಕಬ್ಬು ಹಾಕಿ ಎರಡು ತಿಂಗಳಾದರೂ ರೈತರ ಬ್ಯಾಂಕ್ ಖಾತೆಗೆ ಹಣ ಬಂದಿಲ್ಲ, ಇದು ಸಹಜವಾಗಿಯೇ ರೈತರ ಆಕ್ರೋಶಕ್ಕೆ ಕಾರಣವಾಗಿದೆ. ವರ್ಷವಿಡೀ ಕಬ್ಬನ್ನ ಬೆಳೆಸಿದ್ದೇವೆ, ಗೊಬ್ಬರ ಬೀಜ ಹೀಗೆ ಹತ್ತಾರು ಕಡೆಗಳಲ್ಲಿ ಸಾಲ ಮಾಡಿಕೊಂಡಿದ್ದೇವೆ. ಕಬ್ಬು ಮಾರಾಟದಿಂದ ಬಂದ ಹಣದಲ್ಲಿ ಸಾಲ ತೀರಿಸಬೇಕು. ಆದರೆ ಸಕ್ಕರೆ ಕಾರ್ಖಾನೆಯವರು ಮಾತ್ರ ರೈತರಿಗೆ ಕೊಡಬೇಕಾದ ಹಣ ಕೊಟ್ಟಿಲ್ಲ. ಹೀಗಾಗಿ ಕಾರ್ಖಾನೆಗೆ ಅಲೆದಾಡುವ ಪರಿಸ್ಥಿತಿ ನಿರ್ಮಾಣವಾಗಿದೆ ಎಂದು ಕಬ್ಬು ಬೆಳೆಗಾರ ಚಾಂದಪಾಷಾ ಅವರು ಅಳಲು ತೋಡಿಕೊಂಡಿದ್ದಾರೆ. ಪ್ರತಿಭಟನೆ ಎಚ್ಚರಿಕೆ ನೀಡಿದ ರೈತರು ಯಾವುದೆ ಸಕ್ಕರೆ ಕಾರ್ಖಾನೆಗೆ ರೈತರು ಕಬ್ಬು ಹಾಕಿದ ಎರಡು ವಾರದಲ್ಲಿ ಕೊಡಬೇಕಾದ ಹಣವನ್ನ ಪಾವತಿ ಮಾಡಬೇಕು ಎಂಬ ನಿಯಮವಿದೆ.

ಆದರೆ ಕಾರ್ಖಾನೆಗೆ ಕಬ್ಬು ನೀಡಿ ತಿಂಗಳು ಕಳೆದರೂ ರೈತರಿಗೆ ಕೊಡಬೇಕಾದ ಹಣ ಕೊಡುತ್ತಿಲ್ಲ. ಈಗ ರೈತರು ಕಡಲೆ, ಕುಸುಬಿ, ಜೋಳವನ್ನ ಸಾಲತಂದು ನಾಟಿ ಮಾಡಿದ್ದಾರೆ. ರಸಗೊಬ್ಬರ ಖರೀದಿಸಲು ಹಣವಿಲ್ಲ, ಹೀಗಾಗಿ ಬೇಗ ರೈತರಿಗೆ ಕೊಡಬೇಕಾದ ಹಣವನ್ನ ಎರಡು ದಿನದಲ್ಲಿ ಕೊಡದೇ ಹೋದರೆ ಪ್ರತಿಭಟನೆ ಮಾಡುವ ಎಚ್ಚರಿಕೆ ನೀಡಿದ್ದಾರೆ.

ರೈತರ ಬೆನ್ನಿಗೆ ನಿಂತ ಜಿಲ್ಲಾಧಿಕಾರಿ ಇನ್ನು ಬೀದರ್ ಜಿಲ್ಲಾಧಿಕಾರಿ ರೈತರ ಬೆನ್ನಿಗೆ ನಿಂತಿದ್ದು, ಎರಡು ವಾರದೊಳಗಾಗಿ ರೈತರಿಗೆ ಬಾಕಿ ಹಣ ಕೊಡದಿದ್ದರೆ ತಕ್ಕ ಬೆಲೆತೆರಬೇಕಾಗುತ್ತದೆ ಎಂದು ಎಚ್ಚರಿಕೆ ನೀಡಿದ್ದಾರೆ. ಜಿಲ್ಲಾಧಿಕಾರಿಯ ಈ ನಡೆಯಿಂದ ರೈತರು ಸಂತಸಗೊಂಡಿದ್ದಾರೆ. ಜೊತೆಗೆ ಜಿಲ್ಲಾಡಳಿತ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರು ಕೂಡ ರೈತರಿಗೆ ಕಾರ್ಖಾನೆಗಳಿಂದ ಕಬ್ಬಿನ ಹಣ ಪಡೆದುಕೊಂಡು ರೈರಿಗೆ ಪಾವತಿಸುವಂತೆ ಒತ್ತಡ ಹಾಕಿದರು ಕೂಡ ರೈತರಿಗೆ ಹಣ ಮಾತ್ರ ಸಂದಾಯ ಮಾಡಲು ಕಾರ್ಖಾನೆ ಮಾಲೀಕರು ಮುಂದಾಗಿಲ್ಲ.

ಜಿಲ್ಲಾಡಳಿತ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರು ಕಾಳಜಿವಹಿಸಿ ನಮಗೆ ಸೇರಬೇಕಾದ ಹಣವನ್ನ ಆದಷ್ಟು ಬೇಗ ಕೊಡಿಸಿ ಎಂದು ರೈತರು ಮನವಿ ಮಾಡಿದ್ದಾರೆ. ಬೀದರ್ ಜಿಲ್ಲೆಯಲ್ಲಿ ಸಾವಿರಾರು ರೈತರು ಬೆಳೆದ ಕಬ್ಬನ್ನು ಸಕ್ಕರೆ ಕಾರ್ಖಾನೆಯವರಿಗೆ ಕೊಟ್ಟು ಹಣ ಪಡೆಯಲಾಗದೆ ಕೈಕೈ ಹಿಸಿಕೊಂಡು ಕುಳಿತುಕೊಳ್ಳುವಂತಹ ಸ್ಥಿತಿ ನಿರ್ಮಾಣವಾಗಿದೆ.

ಸಾವಿರಾರು ರೂ. ಸಾಲ ಮಾಡಿದ ಹಣವನ್ನು ರೈತರು ಸಾಲಗಾರರಿಗೆ ಕೊಡಲು ಸಾಧ್ಯವಾಗುತ್ತಿಲ್ಲ. ಇತ್ತ ಕಬ್ಬು ತೆಗೆದುಕೊಂಡು ಹೋದ ಕಾರ್ಖಾನೆಯವರು ರೈತರಿಗೆ ಕೊಡಬೇಕಾದ ಹಣ ಕೊಡುತ್ತಿಲ್ಲ. ಇದು ರೈತರನ್ನ ಸಂಕಷ್ಟಕ್ಕೆ ತಳ್ಳಿದೆ.

Printed by: R Ramesh, Published by Abhishek D R On Behalf of Abhishek D R, Printed at Maruthi Enterprises. No.1159, Near Floor Mill, D Cross, Doddaballapura Town, Bengaluru rural, Karnataka - 561203, Published at No. 3769/1, Rajarathna Nivasa, KSRTC Layout, Near Ambedkar Stadium, Rayan Nagara, Nelamangala. Editor Abhishek D R.